# ಕರ್ನಾಟಕ ವಿಧಾನ ಪರಿಷತ್ತು

**14ನೇ ಫೆಬ್ರವರಿ 2019**
**ಗುರುವಾರ**

## ವಿಷಯಾನುಕ್ರಮಣಿಕೆ


1. ಸಭೆಯ ಮುಂದಿಡಲಾದ ಕಾಗದ ಪತ್ರಗಳು
2. ವರದಿಯನ್ನೊಪ್ಪಿಸುವುದು
3. ಶಾಸನ ರಚನೆ

ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ

*ಅ) ಭೂ ಸ್ವಾಧೀನ, ಪುನರ್ವಸತಿ ಮತ್ತು ಪುನರ್ವ್ಯವಸ್ಥೆಯಲ್ಲಿ ನ್ಯಾಯಯುತ ಪರಿಹಾರ ಮತ್ತು ಪಾರದರ್ಶಕತೆ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕ, 2019*

ಶ್ರೀ ಆರ್.ವಿ.ದೇಶಪಾಂಡೆ(ಕಂದಾಯ ಸಚಿವರು)

ಶ್ರೀ ಕೆ.ಸಿ.ಕೊಂಡಯ್ಯ

ಶ್ರೀ ಎಸ್.ಎಲ್.ಭೋಜೇಗೌಡ

ಶ್ರೀ ಶರಣಪ್ಪ ಮಟ್ಟೂರು

ಶ್ರೀ ಪಿ.ಆರ್.ರಮೇಶ್

(ವಿಧೇಯಕ ಅಂಗೀಕರಿಸಲ್ಪಟ್ಟಿತು)

*ಆ) ಬಸವಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ, 2019*

ಶ್ರೀ ಆರ್.ವಿ.ದೇಶಪಾಂಡೆ(ಕಂದಾಯ ಸಚಿವರು)

ಶ್ರೀ ಐವನ್ ಡಿ'ಸೋಜಾ

(ವಿಧೇಯಕ ಅಂಗೀಕರಿಸಲ್ಪಟ್ಟಿತು)

*ಇ) ಕರ್ನಾಟಕ ಋಣ ಪರಿಹಾರ ವಿಧೇಯಕ, 2018*

ಶ್ರೀ ಬಂಡೆಪ್ಪ ಖಾಶೆಂಪೂರ್(ಸಹಕಾರ ಸಚಿವರು)

ಶ್ರೀ ಕೆ.ಟಿ.ಶ್ರೀಕಂಠೇಗೌಡ

ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು)

ಶ್ರೀ ಆರ್.ವಿ.ದೇಶಪಾಂಡೆ(ಕಂದಾಯ ಸಚಿವರು)

(ವಿಧೇಯಕ ಅಂಗೀಕರಿಸಲ್ಪಟ್ಟಿತು)

*ಈ) ಎನ್.ಐ.ಇ. ವಿಶ್ವವಿದ್ಯಾಲಯ ವಿಧೇಯಕ, 2019*

ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು)

(ವಿಧೇಯಕ ಅಂಗೀಕರಿಸಲ್ಪಟ್ಟಿತು)


" ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

*ಉ) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ, 2019*

ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು)
ಶ್ರೀ ಕೆ.ಟಿ.ಶ್ರೀಕಂಠೇಗೌಡ
ಶ್ರೀ ಪುಟ್ಟಣ್ಣ

(ವಿಧೇಯಕ ಅಂಗೀಕರಿಸಲ್ಪಟ್ಟಿತು)

*ಊ) ಆದಿಚುಂಚನಗಿರಿ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2019*

ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು)

(ವಿಧೇಯಕ ಅಂಗೀಕರಿಸಲ್ಪಟ್ಟಿತು)

*ಋ) ಆರ್.ವಿ.ವಿಶ್ವವಿದ್ಯಾಲಯ ವಿಧೇಯಕ, 2019*

ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು)

(ವಿಧೇಯಕ ಅಂಗೀಕರಿಸಲ್ಪಟ್ಟಿತು)

*ಎ) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2019*

ಡಾ:ಜಯಮಾಲ (ಸಭಾನಾಯಕರು) (ಮುಖ್ಯಮಂತ್ರಿಗಳ ಪರವಾಗಿ)
ಶ್ರೀ ಪುಟ್ಟಣ್ಣ
ಶ್ರೀ ಶರಣಪ್ಪ ಮಟ್ಟೂರು
ಶ್ರೀ ಎಸ್.ಆರ್.ಪಾಟೀಲ್
ಶ್ರೀ ಯು.ಟಿ.ಖಾದರ್(ನಗರಾಭಿವೃದ್ಧಿ ಸಚಿವರು)
ಶ್ರೀ ಕೆ.ಸಿ.ಕೊಂಡಯ್ಯ
ಶ್ರೀ ಕೆ.ಟಿ.ಶ್ರೀಕಂಠೇಗೌಡ

(ವಿಧೇಯಕ ಅಂಗೀಕರಿಸಲ್ಪಟ್ಟಿತು)

4. ಪ್ರಕಟಣೆ
5. ಸಭಾಪತಿಯವರ ಅನುಮತಿ ಮೇರೆಗೆ ಪ್ರಸ್ತಾಪಿಸಲ್ಪಟ್ಟ ವಿಷಯಗಳಿಗೆ ಸಂಬಂಧಿಸಿದಂತೆ ಸಚಿವರ ಹೇಳಿಕೆಗಳು

ಅ) ರಾಜ್ಯದಲ್ಲಿ ಸರ್ವ ಶಿಕ್ಷಣ ಅಭಿಯಾನ ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ವೇತನ ಪಾವತಿಸದಿರುವ ಬಗ್ಗೆ.

ಡಾ॥ಜಯಮಾಲ(ಸಭಾನಾಯಕರು) (ಮುಖ್ಯಮಂತ್ರಿಗಳ ಪರವಾಗಿ)

ಆ) ಹುಬ್ಬಳ್ಳಿ-ಧಾರವಾಡ ಶಹರ ಮತ್ತು ಗ್ರಾಮಾಂತರ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಡಿಸೆಂಬರ್ ಹಾಗೂ ಜನವರಿ ತಿಂಗಳ ವೇತನ ಬಿಡುಗಡೆ ಕುರಿತು.

ಡಾ॥ಜಯಮಾಲ(ಸಭಾನಾಯಕರು)(ಮುಖ್ಯಮಂತ್ರಿಗಳ ಪರವಾಗಿ)

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”

6. ಸಭಾಪತಿಯವರ ತೀರ್ಪು
7. ವಿತ್ತೀಯ ಕಾರ್ಯಕಲಾಪ

*2019–2020ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ*

ಶ್ರೀ ಹೆಚ್.ಎಂ.ರೇವಣ್ಣ

ಡಾ॥ಜಯಮಾಲ(ಸಭಾನಾಯಕರು) (ಮುಖ್ಯಮಂತ್ರಿಗಳ ಪರವಾಗಿ)

ಶ್ರೀ ಎಸ್.ಆರ್.ಪಾಟೀಲ್

ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು)

8. ಸಭೆಯ ಮುಂದಿಡಲಾದ ಕಾಗದ ಪತ್ರಗಳು
9. ಶಾಸನ ರಚನೆ

ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ

*ಎ) ಕರ್ನಾಟಕ ಧನವಿನಿಯೋಗ ವಿಧೇಯಕ, 2019*

ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)
(ಮುಖ್ಯಮಂತ್ರಿಗಳ ಪರವಾಗಿ)

ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು)

(ವಿಧೇಯಕ ಅಂಗೀಕರಿಸಲ್ಪಟ್ಟಿತು)

*ಬಿ) ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2019*

ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)
(ಮುಖ್ಯಮಂತ್ರಿಗಳ ಪರವಾಗಿ)

ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು)

(ವಿಧೇಯಕ ಅಂಗೀಕರಿಸಲ್ಪಟ್ಟಿತು)

10. ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಮತ್ತು ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಡಾ:ಜಯಮಾಲ(ಸಭಾನಾಯಕರು)

11. ಸಚಿವರ ಹೇಳಿಕೆಗಳು
12. ಸಭೆಯ ಮುಂದಿಡಲಾದ ಕಾಗದ ಪತ್ರಗಳು
13. ಶಾಸನ ರಚನೆ

ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ

*ಒ) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2018*

ಶ್ರೀ ಈ.ತುಕಾರಾಂ(ವೈದ್ಯಕೀಯ ಶಿಕ್ಷಣ ಸಚಿವರು)

(ವಿಧೇಯಕ ಅಂಗೀಕರಿಸಲ್ಪಟ್ಟಿತು)

14. ಸಾರಾಂಶ

~*~*~*~*~

" ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

(63) 11.10 14-02-2019 ಸಿಎಸ್/ಜಿಆರ್

**ಕರ್ನಾಟಕ ವಿಧಾನ ಪರಿಷತ್ತು**

*ಗುರುವಾರ, 14ನೇ ಫೆಬ್ರವರಿ 2019*

ಸದನವು ವಿಧಾನ ಸೌಧದಲ್ಲಿರುವ ವಿಧಾನ ಪರಿಷತ್ತಿನ ಸಭಾಂಗಣದಲ್ಲಿ
ಪೂರ್ವಾಹ್ನ 11 ಗಂಟೆ 15 ನಿಮಿಷಕ್ಕೆ ಸಮಾವೇಶಗೊಂಡಿತು.

ಸಭಾಪತಿ (ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ) ಯವರು ಪೀಠದಲ್ಲಿ ಉಪಸ್ಥಿತರಿದ್ದರು.

~~~~~~~

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "
~~~~~~~

## 1. ಸಭೆಯ ಮುಂದಿಡಲಾದ ಕಾಗದ ಪತ್ರಗಳು

**ಕಾರ್ಯದರ್ಶಿ, ಕವಿಪ:–** ವಿಧಾನಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2019ನೇ ಸಾಲಿನ ಭೂ ಸ್ವಾಧೀನ, ಪುನರ್ವಸತಿ ಮತ್ತು ಪುನರ್ವ್ಯವಸ್ಥೆಯಲ್ಲಿ ನ್ಯಾಯಯುತ ಪರಿಹಾರ ಮತ್ತು ಪಾರದರ್ಶಕತೆ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕ ಮತ್ತು 2018ನೇ ಸಾಲಿನ ಕರ್ನಾಟಕ ಋಣ ಪರಿಹಾರ ವಿಧೇಯಕ ಹಾಗೂ ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುತ್ತಿದ್ದೇನೆ.

1. ಬಸವಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ, 2019
2. ಎನ್‌ಐಇ ವಿಶ್ವವಿದ್ಯಾಲಯ ವಿಧೇಯಕ, 2019
3. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2019
4. ಆದಿಚುಂಚನಗಿರಿ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2019
5. ಆರ್.ವಿ.ವಿಶ್ವವಿದ್ಯಾಲಯ ವಿಧೇಯಕ, 2019
6. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2018

## 2. ವರದಿಯನ್ನೊಪ್ಪಿಸುವುದು

**ಸಭಾಪತಿಯವರು:–** 2018–19ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 27ನೇ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಸಭಾಪತಿಯವರು:– ವರದಿಯನ್ನೊಪ್ಪಿಸಲಾಯಿತು.

## 3. ಶಾಸನ ರಚನೆ

## ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ

**ಅ) ಭೂ ಸ್ವಾಧೀನ, ಪುನರ್ವಸತಿ ಮತ್ತು ಪುನರ್ವ್ಯವಸ್ಥೆಯಲ್ಲಿ ನ್ಯಾಯಯುತ ಪರಿಹಾರ ಮತ್ತು ಪಾರದರ್ಶಕತೆ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕ, 2019**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಆರ್.ವಿ.ದೇಶಪಾಂಡೆ(ಕಂದಾಯ ಸಚಿವರು):–** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ರ ಭೂ ಸ್ವಾಧೀನ, ಪುನರ್ವಸತಿ ಮತ್ತು ಪುನರ್ವ್ಯವಸ್ಥೆಯಲ್ಲಿ ನ್ಯಾಯಯುತ ಪರಿಹಾರ ಮತ್ತು ಪಾರದರ್ಶಕತೆ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

“ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

**ಶ್ರೀ ಆರ್.ವಿ.ದೇಶಪಾಂಡೆ(ಕಂದಾಯ ಸಚಿವರು):–** ಮಾನ್ಯ ಸಭಾಪತಿಗಳೇ, ಭಾರತ ಸರ್ಕಾರ The Right to Fair Compensation and Transparency in Land Acquisition, Rehabilitation and Resettlement Act ನ್ನು 2013ನೇ ಸಾಲಿನಲ್ಲಿ ಜಾರಿಗೆ ತಂದಿತು. ಇದು ಬಹಳ ಒಳ್ಳೆಯ ಕಾನೂನು. ಈ ಕಾನೂನಿಗೆ ನಾವೇನು ಬದಲಾವಣೆಗಳನ್ನು ಮಾಡಿ ತಿದ್ದುಪಡಿಗಳನ್ನು ಮಾಡುತ್ತಿಲ್ಲ. ಆದರೆ ಹಲವಾರು ರಾಜ್ಯಗಳು ತೆಲಂಗಾಣ. ಆಂಧ್ರಪ್ರದೇಶ, ಮಹಾರಾಷ್ಟ್ರ ಗುಜರಾತ್ ಹೀಗೆ 14 ರಾಜ್ಯಗಳು ತಮ್ಮ ರಾಜ್ಯಗಳ ಸರ್ವಾಂಗೀಣ ಅಭಿವೃದ್ಧಿಯ ಸಲುವಾಗಿ ಭೂಸ್ವಾಧೀನ ಪ್ರಕ್ರಿಯೆಯು ಸರಿಯಾದ ಸಮಯದಲ್ಲಿ ಪಾರದರ್ಶಕವಾಗಿ ಆಗಬೇಕೆನ್ನುವ ಕಾರಣದಿಂದ ಈ ಕಾಯಿದೆಗೆ ತಿದ್ದುಪಡಿಗಳನ್ನು ಮಾಡಿಕೊಂಡಿವೆ. ಈ ಕಾಯಿದೆ ನಮ್ಮ ಸದನಗಳಲ್ಲಿ ಪಾಸ್ ಮಾಡಿದ ನಂತರವೂ ಸಹ ಅದು ರಾಷ್ಟ್ರಪತಿಗಳ ಒಪ್ಪಿಗೆಗೆ ಹೋಗುತ್ತದೆ. ಈ ತಿದ್ದುಪಡಿಯಲ್ಲಿ ಮುಖ್ಯವಾಗಿ ಎರಡು ವಿಚಾರಗಳಿವೆ. ಮೊದಲನೆಯದಾಗಿ ಮೂಲ ಕಾನೂನಿನಲ್ಲಿ Social Impact Study ಬಗ್ಗೆ ಅಧ್ಯಯನ ಮಾಡಬೇಕೆಂದಿದೆ. ನಾವು ಅದರ ವಿರುದ್ಧ ಇಲ್ಲ, ಆದರೂ ಸಹ ಈ ಪ್ರಕ್ರಿಯೆಯಲ್ಲಿ ಸಾಕಷ್ಟು ವಿಳಂಬವಾಗುತ್ತಿದೆ. ಆದ್ದರಿಂದ ಕಲಂ 10(ಎ) ನಲ್ಲಿ ಕೇಂದ್ರ ಸರ್ಕಾರದ ಯೋಜನೆಗಳಿದ್ದರೆ Defence, Air ಮುಂತಾದವು ಮತ್ತು ರಾಜ್ಯ ಸರ್ಕಾರದ ಪ್ರಾಜೆಕ್ಟ್‌ಗಳಲ್ಲಿ ಮೇಕೆದಾಟು ಯೋಜನೆ ಬರುತ್ತದೆ.

(ಮುಂದು)

(64)/14–02–2019/11–20/ಎಲ್‌ಎಂ–ಎಂಡಿ

**ಶ್ರೀ ಆರ್.ವಿ.ದೇಶಪಾಂಡೆ(ಮುಂದು)**

ಕೆಲವು ದೊಡ್ಡ ಯೋಜನೆಗಳನ್ನು ಕರ್ನಾಟಕ ಸರ್ಕಾರ ತೆಗೆದುಕೊಳ್ಳುತ್ತದೆ. ಆ ಪರಿಸ್ಥಿತಿಯಲ್ಲಿ 3 ವರ್ಷ ಬೇಕಾಗುತ್ತದೆ. ಹೀಗಾಗಿ ಅದು Social Impact Study ನಿಂದ ರಿಯಾಯಿತಿ ಕೇಳುತ್ತಿದ್ದೇವೆ. ಇದನ್ನು ಬಹಳಷ್ಟು ರಾಜ್ಯಗಳು

ಮಾಡಿವೆ. ಇನ್ನೊಂದು ಮಹತ್ವದ ಸಂಗತಿ ಎಂದರೆ, 5 ವರ್ಷದಲ್ಲಿ ಯೋಜನೆಯನ್ನು ಪೂರ್ಣಗೊಳಿಸಬೇಕು. ಇಲ್ಲದಿದ್ದರೆ land acquisition lapse ಆಗುತ್ತದೆ. ನಾವು 5 ವರ್ಷ ಅವಧಿ ಇಟ್ಟಿದ್ದೇವೆ. ಆದರೆ ಕೆಲವು ಜನ ಬೇಕು ಎಂದೇ ಕೋರ್ಟ್‌ಗೆ ಹೋಗಿ stay or injunction ನಿಂದ ತಡ ಮಾಡಿಸುತ್ತಾರೆ. ಆ ತಡವಾಗಿರುವ ಸಮಯವನ್ನು exclude ಮಾಡಿಕೊಡಲು ಕೇಳುತ್ತಿದ್ದೆವೆ. The period which goes into litigation should be excluded ಎಂದು ಹೇಳಲಾಗಿದೆ.

ಮೂರನೆಯದು, consent ಗೆ ಸಂಬಂಧಿಸಿದಂತೆ ಹೇಳುವುದಾದರೆ, ಒಂದು land acquisition ನಲ್ಲಿ enquiry ಇತ್ಯಾದಿಗಳನ್ನು ಮಾಡಬೇಕಾದರೆ, it takes almost 2 years. There is a provision in KIADB Act called 'consent award'. ಯಾರೋ ಬಂದು ನಾವು ಭೂಮಿ ಕೊಡಲು ತಯಾರಿದ್ದೇವೆ, ಅಗ್ರಿಮೆಂಟ್ ಮಾಡಿಕೊಳ್ಳಲು ತಯಾರಿದ್ದೇವೆ ಎಂದು ಹೇಳಿದಾಗ ಆ consent ಮೇಲೆ ಮಾಡಲು ಅವಕಾಶ ಇರಬೇಕು. ಅವರಿಗೆ ಏನು ಪರಿಹಾರ ಸಿಗಬೇಕು ಅದರಲ್ಲಿ ಏನು ಬದಲಾವಣೆ ಮಾಡಿರುವುದಿಲ್ಲ. ಏನು ಕಾಯ್ದೆ ಇದೆಯೋ ಅದೇ ಪ್ರಕಾರವಾಗಿ ನಾವು ಪರಿಹಾರವನ್ನು ಕೊಡುತ್ತೇವೆ. ಇಲ್ಲಿ ಹಣ ಕಳೆದುಕೊಳ್ಳುವ ಪ್ರಶ್ನೆ ಬರುವುದಿಲ್ಲ. ಬೇರೆ–ಬೇರೆ 14 ರಾಜ್ಯಗಳಲ್ಲಿ ಇದು ಜಾರಿಗೆ ಬಂದಿದೆ. ಇದರಲ್ಲಿ ಇನ್ನೊಂದು ಅಂಶ ಎಂದರೆ, National Security, Defence ಗೆ ಸಂಬಂಧಪಟ್ಟ ಯೋಜನೆಗಳು ಬಂದಾಗ ನಾವು ಸ್ವಲ್ಪ ಪ್ರಾಧಾನ್ಯತೆಯನ್ನಿಟ್ಟುಕೊಂಡು ಮಾಡಬೇಕಾಗುತ್ತದೆ. ಅದಕ್ಕಾಗಿ ಸರ್ಕಾರ ಕೆಲವು ಕ್ರಮಗಳನ್ನು ತೆಗೆದುಕೊಳ್ಳಬೇಕಾಗುತ್ತದೆ. ಸಹಭಾಗಿತ್ವದಲ್ಲಿ ರೈಲ್ವೆ ಯೋಜನೆಗಳು ಬರುತ್ತವೆ, ಇವು ತುಂಬಾ ತಡವಾಗುತ್ತಿವೆ. ಆ ದಿಕ್ಕಿನಲ್ಲಿ ಈ ವಿಧೇಯಕಕ್ಕೆ ತಿದ್ದುಪಡಿಯನ್ನು ತರಲಾಗಿದೆ. Food security ಗೆ ಸಂಬಂಧಿಸಿದಂತೆ ಹೇಳುವುದಾದರೆ, multi crop land ಇದ್ದರೆ ಅದನ್ನು ಸ್ವಾಧೀನ ಪಡಿಸಿಕೊಳ್ಳಬಹುದು, ಆದರೆ ಅಷ್ಟೆ ಭೂಮಿಯನ್ನು ನಾವು waste land development ಮಾಡಬೇಕಾಗುತ್ತದೆ. ಕೆಲವೊಮ್ಮೆ waste land ಸಿಗುವುದಿಲ್ಲ. ಇಂತಹ ಸಂದರ್ಭದಲ್ಲಿ ಅದಕ್ಕೆ ರಿಯಾಯಿತಿಯನ್ನು ಕೇಳಲಾಗುತ್ತಿದೆ. ಈ ತಿದ್ದುಪಡಿ ತರುವುದರಿಂದ ಪಾರದರ್ಶಕತೆ ಬರುತ್ತದೆ, speedy disposal ಆಗುತದೆ, ನಿಗದಿತ ಸಮಯದಲ್ಲಿ ಯೋಜನೆ ಮುಗಿಯುತ್ತದೆ, escalation cost ಬರುವುದಿಲ್ಲ, land acquisition process ವೇಗವಾಗಿ ಆಗುತ್ತದೆ ಹಾಗೂ ಪಾರದರ್ಶಕತೆ ಬರುತ್ತದೆ. ಇನ್ನೊಂದು ವಿಚಾರ ಎಂದರೆ, ಇಲ್ಲಿ land ownership ಎಲ್ಲವು ಸರ್ಕಾರದ್ದಾಗಿರುತ್ತದೆ. ಖಾಸಗಿಯವರಿಗೆ ಇದು ಅನ್ವಯಿಸುವುದಿಲ್ಲ. Here land ownership lies with the State Government or Central

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

Government. ಖಾಸಗಿಯವರಿಗೆ ಇದರಿಂದ ಯಾವುದೆ ಲಾಭವಿಲ್ಲ. ಆದ್ದರಿಂದ ಸದರಿ ವಿಧೇಯಕಕ್ಕೆ ಸದನವು ಒಪ್ಪಿಗೆಯನ್ನು ಕೊಡಬೇಕೆಂದು ತಮ್ಮ ಮುಖಾಂತರ ಕೇಳಿಕೊಳ್ಳುತ್ತೇನೆ.

**ಶ್ರೀ ಕೆ.ಸಿ.ಕೊಂಡಯ್ಯ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-** ಮಾನ್ಯ ಸಭಾಪತಿಗಳೆ, ಸದರಿ ವಿಧೇಯಕವನ್ನು ನಾನು ಸ್ವಾಗತ ಮಾಡುತ್ತೇನೆ. ಒಂದು ವಿಚಾರ ಎಂದರೆ, ಸೆಕ್ಷನ್ 101ರಲ್ಲಿ;

> *"ಬಳಕೆ ಮಾಡದ ಭೂಮಿಯನ್ನು ಹಿಂತಿರುಗಿಸುವುದು", ಈ ಅಧಿನಿಯಮ ಅಡಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾದ ಯಾವುದೆ ಭೂಮಿಯನ್ನು ಸ್ವಾಧೀನಕ್ಕೆ ಒಳಪಡಿಸಿಕೊಂಡ ದಿನಾಂಕದಿಂದ 5 ವರ್ಷದ ಅವಧಿಯೊಳಗೆ ಬಳಸದೇ ಬಿಟ್ಟಿದರೆ ಅದನ್ನು ಮೂಲ ಮಾಲೀಕ ಅಥವಾ ಮಾಲೀಕರು ಅಥವಾ ಸಂದರ್ಭಾನುಸಾರವಾಗಿ ಕಾನೂನುಬದ್ಧ ವಾರಸುದಾರರಿಗೆ ಯುಕ್ತ ಸರ್ಕಾರದಿಂದ ನಿರ್ದಿಷ್ಟಪಡಿಸಬಹುದಾದ ವಿಧಾನದಲ್ಲಿ ಪುನರಾವರ್ತನೆ ಮೂಲಕ ಯುಕ್ತ ಸರ್ಕಾರದ ಭೂ ಬ್ಯಾಂಕ್‌ಗೆ ಹಿಂತಿರುಗಿಸತಕ್ಕದ್ದು."*

ಯಾವುದೋ ಒಂದು ಉದ್ದೇಶಕ್ಕಾಗಿ ಭೂ ಸ್ವಾಧೀನ ಮಾಡಿಕೊಂಡು ಮೂಲ ಮಾಲೀಕನಿಗೆ ಕಾನೂನು ಪ್ರಕಾರ ಪರಿಹಾರವನ್ನು ಕೊಡಲಾಗುತ್ತದೆ. 5 ವರ್ಷದಲ್ಲಿ ಯೋಜನೆ ಆಗದಿದ್ದರೆ ಪುನಃ ಭೂಮಿಯನ್ನು ಸ್ವಾಧೀನ ಮಾಡಿಕೊಂಡು ಮೂಲ ವಾರಸುದಾರನಿಗೆ ಕೊಡುತ್ತೇವೆ ಎಂದು ಹೇಳಲಾಗಿದೆ, ಆಗ ಹಣ ಕಟ್ಟಿದ ಮಾಲೀಕನಿಗೆ ಏನು ಕೊಡುತ್ತೀರಿ? ಅವನಿಗೆ ಹಿಂದಿರುಗಿಸಲಿಲ್ಲವೆಂದರೆ, ಈ ಒಂದು ಅಂಶದಲ್ಲಿ ನಮಗೆ ಅನುಮಾನ ಬರುತ್ತದೆ. ಸೆಕ್ಷನ್ 101ನ್ನು ಓದಿ. ಯೋಜನೆಯನ್ನು ಪೂರ್ತಿ ಮಾಡದಿದ್ದರೂ ಅವನು ಪರಿಹಾರವನ್ನು ಕೊಟ್ಟುಬಿಟ್ಟಿರುತ್ತಾನೆ.

**ಶ್ರೀ ಆರ್.ವಿ.ದೇಶಪಾಂಡೆ(ಕಂದಾಯ ಸಚಿವರು):-** ಮಾನ್ಯ ಸಭಾಪತಿಗಳೆ, 5 ವರ್ಷದಲ್ಲಿ ಯೋಜನೆ ಮುಗಿಯಬೇಕು. ಆದರೆ ಕೆಲವು ಯೋಜನೆಗಳಲ್ಲಿ tender conditions ಪ್ರಕಾರ 8 ವರ್ಷಗಳು ಇರುತ್ತದೆ. ಆ ರೀತಿಯ ಯೋಜನೆಗಳು ಬಂದಾಗ till that period is over, it should not lapse. ಇಷ್ಟೆ ಇರುವುದು. 5 ವರ್ಷದಲ್ಲಿ ಯೋಜನೆ ಮುಗಿಯಬೇಕು, ಆದರೆ ಕೆಲವು ಯೋಜನೆಯ tender conditions ನಲ್ಲಿಯೇ 6 ವರ್ಷ 7 ವರ್ಷ ಸಮಯವನ್ನು ಕೊಡಲಾಗಿರುತ್ತದೆ. ಆ ಸಮಯದಲ್ಲಿ ಇದು ಅನ್ವಯಿಸುವುದಿಲ್ಲ. ಅದಕ್ಕಷ್ಟೇ ಸೀಮಿತವಾಗಿ ಈ ವಿಧೇಯಕದಲ್ಲಿ ಹೇಳಿದ್ದೇವೆ.

**ಶ್ರೀ ಕೆ.ಸಿ.ಕೊಂಡಯ್ಯ:-** ಯೋಜನೆಯನ್ನು ಪೂರ್ತಿ ಮಾಡುವುದೇ ಇಲ್ಲ, ಆದರೆ ಭೂಸ್ವಾಧೀನ ಮಾಡಿಕೊಂಡಿರುತ್ತಾರೆ. ಅಂತಹ ಪರಿಸ್ಥಿತಿಯಲ್ಲಿ ನೀವು ಏನು ಮಾಡುತ್ತೀರಿ?

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಆರ್.ವಿ.ದೇಶಪಾಂಡೆ:-** ಮಾನ್ಯ ಸಭಾಪತಿಗಳೆ, 2 ವರ್ಷದಲ್ಲಿ ಒಂದು ಯೋಜನೆಯನ್ನು ಪೂರ್ಣಗೊಳಿಸಬೇಕು. ಪೂರ್ಣಗೊಳಿಸದಿದ್ದರೆ, automatically that land will go back. ಪರಿಹಾರ ಕೊಟ್ಟಿದ್ದರೆ ಅವನು ವಾಪಸ್ ಕೊಡಬೇಕಾಗುತ್ತದೆ, ಇಲ್ಲದಿದ್ದರೆ ಭೂಮಿ ವಾಪಸ್ ಹೋಗುತ್ತದೆ.

**ಶ್ರೀ ಕೆ.ಸಿ.ಕೊಂಡಯ್ಯ:-** ಪರಿಹಾರವನ್ನು ವಾಪಸ್ ಕೊಡುತ್ತೀರಾ?

**ಶ್ರೀ ಆರ್.ವಿ.ದೇಶಪಾಂಡೆ:-** ಸ್ವಾಭಾವಿಕವಾಗಿ ಕೊಡುತ್ತೇವೆ.

**ಶ್ರೀ ಕೆ.ಸಿ.ಕೊಂಡಯ್ಯ:-** ಮಾನ್ಯ ಸಭಾಪತಿಗಳೆ, ಈ ವಿಧೇಯಕದಲ್ಲಿ ಸ್ಪಷ್ಟತೆ ಇಲ್ಲ.

**ಶ್ರೀ ಎಸ್.ಎಲ್.ಭೋಜೆಗೌಡ:-** ಮಾನ್ಯ ಸಭಾಪತಿಗಳೆ, ಇದರಲ್ಲಿ ಒಂದು ಸಣ್ಣ ಸ್ಪಷ್ಟೀಕರಣ ಬೇಕಾಗಿದೆ. ಮಾನ್ಯ ಕೊಂಡಯ್ಯನವರು ಒಳ್ಳೆಯ ಪ್ರಶ್ನೆಯನ್ನು ಕೇಳಿದ್ದಾರೆ. According to land acquisition rules, if the project is not completed within the stipulated period, ಟೆಂಡರ್‌ನಲ್ಲಿ ನಿಗದಿತ ಅವಧಿ ಮುಗಿದ ಮೇಲೆ ಮೂಲ ಮಾಲೀಕನಿಗೆ ಭೂಮಿಯನ್ನು ಸ್ವಮೀತವಾಗಿ ಕೊಡಬೇಕಾಗುತ್ತದೆ. Subject to condition, whatever compensation amount is paid, ಅಷ್ಟೆ ಹಣವನ್ನು ತೆಗೆದುಕೊಳ್ಳಬೇಕಾಗುತ್ತದೆ. Once again you should not claim interest etc. ಆ ದಿನಕ್ಕೆ valuation ಬೇರೆ ಇರುತ್ತದೆ. ಆ valuation ಅನ್ನು ಪರಿಗಣಿಸಬಾರದೆಂಬುದನ್ನು ಈ ವಿಧೇಯಕದಲ್ಲಿ ಸ್ಪಷ್ಟಪಡಿಸಬೇಕು.

**ಶ್ರೀ ಆರ್.ವಿ.ದೇಶಪಾಂಡೆ(ಕಂದಾಯ ಇಲಾಖೆ):-** ಮಾನ್ಯ ಸಭಾಪತಿಗಳೆ, ಮೂಲ ಕಾಯ್ದೆಯಲ್ಲಿ ನಾವು ಯಾವುದೆ tinker ಮಾಡಿರುವುದಿಲ್ಲ. ಸರ್ಕಾರದ ಯೋಜನೆಗಳು ವೇಗವಾಗಿ ಆಗಬೇಕು, ಪಾರದರ್ಶಕವಾಗಬೇಕೆಂದು Social Impact Study and Food Security ಇದರಲ್ಲಿ ಮುಖ್ಯವಾಗಿವೆ. ಬಾಕಿ ಎಲ್ಲವು consequential ಇವೆ. Consent award ಗೆ provision ಇರಲಿಲ್ಲ, ಈಗ provision ಮಾಡಲಾಗಿದೆ. ಜಿಲ್ಲಾಧಿಕಾರಿಗಳು ಟೈಟಲ್ ಸರಿ ಇದೆ ಎಂದು ಹೇಳುತ್ತಾರೆ, if you voluntarily give the land, we will take it without enquiry and pay you compensation as per law. ಹೀಗಾಗಿ main act ನಲ್ಲಿ ಏನೂ tinkering ಮಾಡಿರುವುದಿಲ್ಲ.

"ತಿದ್ದುಪಡಿಯಾಗದ ಪ್ರತಿ: ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕೆ.ಸಿ.ಕೊಂಡಯ್ಯ:–** ಮಾನ್ಯ ಸಭಾಪತಿಗಳೆ, ತಾವು ಸೆಕ್ಷನ್ 101ನ್ನು ಗಮನಿಸಿ. 5 ವರ್ಷ 6 ವರ್ಷವಾದರೂ ಯೋಜನೆಯನ್ನು ಪೂರ್ತಿ ಮಾಡುವುದಿಲ್ಲ. ಆಗ ಸ್ವಾಧೀನಪಡಿಸಿಕೊಂಡಿರುವ ಭೂಮಿಯನ್ನು ವಾಪಸ್ ತೆಗೆದುಕೊಂಡು ಮೂಲ ಭೂ ಮಾಲೀಕನಿಗೆ ಭೂಮಿಯನ್ನು ವಾಪಸ್ ಕೊಡುತ್ತೇವೆ ಎಂದು ಸರ್ಕಾರದವರು ಹೇಳುತ್ತಿದ್ದಾರೆ. ಹಾಗಾದರೆ ಭೂಮಿಯನ್ನು ವಾಪಸ್ ಕೊಡುವಾಗ ಭೂ ಮಾಲೀಕ ಏನು ಹಣವನ್ನು ಪಾವತಿ ಮಾಡಿರುತ್ತಾನೆಯೋ, ಆ ಹಣವನ್ನು ಆತನಿಗೆ ವಾಪಸ್ ಕೊಡಲಾಗುತ್ತದೆಯೆ?

**ಶ್ರೀ ಆರ್.ವಿ.ದೇಶಪಾಂಡೆ:–** ಅವನು ಭೂಮಿಯನ್ನು ವಾಪಸ್ ತೆಗೆದುಕೊಂಡರೆ, ಅವನೇ ಹಣವನ್ನು ವಾಪಸ್ ಕೊಡಬೇಕಾಗುತ್ತದೆ. ಸೆಕ್ಷನ್ 101 ತುಂಬಾ ಸ್ಪಷ್ಟವಾಗಿದೆ.

**ಶ್ರೀ ಶರಣಪ್ಪ ಮಟ್ಟೂರು:–** ಮಾನ್ಯ ಸಭಾಪತಿಗಳೆ, ಮಾನ್ಯ ಕೊಂಡಯ್ಯನವರು ಒಳ್ಳೆಯ ಪ್ರಶ್ನೆಯನ್ನು ಕೇಳಿದ್ದಾರೆ, ಅವರಿಗೆ ಅಭಿನಂದನೆಗಳನ್ನು ಹೇಳುತ್ತೇನೆ. ವಿಧೇಯಕದ 11ನೇ ಪುಟದಲ್ಲಿ ಸೆಕ್ಷನ್ 101ರಲ್ಲಿ ಈ ರೀತಿ ಹೇಳಲಾಗಿದೆ:

> ***"101. Return of unutilised land:-*** *When any land acquired under this Act remains unutilised for a period of five years from the date of taking over the possession, the same shall be returned to the original owner or owners or their heirs, as the case may be, or to the Land Bank of the appropriate Government, by reversion in the manner as may be prescribed by the appropriate Government."*

ಇಲ್ಲಿ ಏನಾಗಿದೆ ಎಂದರೆ, suppose the land has been acquired for the purpose of establishment of Educational Institutions, Industry etc, within the stipulated as mentioned in the particular bill for 5 years, if they fail to complete it for the Government of any Industrialist, what would be the next decision? Whether you are going to return that land to the land owner? The second thing is, we have already taken the compensation when the land has been acquired by the Government ಎನ್ನುವ ಪ್ರಶ್ನೆ ಬಂದಂತಹ ಸಂದರ್ಭದಲ್ಲಿ ಸರ್ಕಾರದಿಂದ ಆಗ ಯಾವ ತೀರ್ಮಾನವನ್ನು ತೆಗೆದುಕೊಳ್ಳಲಾಗುತ್ತದೆ ಎನ್ನುವ ಪ್ರಶ್ನೆಯನ್ನು ಅವರು ಕೇಳುತ್ತಿದ್ದಾರೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಆರ್.ವಿ.ದೇಶಪಾಂಡೆ:-** ಮಾನ್ಯ ಸಭಾಪತಿಗಳೆ, ಮೊದಲನೆಯದಾಗಿ ಇದು ಖಾಸಗಿ ಯೋಜನೆಗಳಿಗೆ ಅನ್ವಯಿಸುವುದಿಲ್ಲ. ಉದಾಹರಣೆಗೆ 'ಟಾಟಾ ಗ್ರೂಪ್' ಎನ್ನುವ ಉದ್ಯಮಕ್ಕೆ ನಾವು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವುದಿಲ್ಲ. ಸೆಕ್ಷನ್ 10-ಎ ನೋಡಿ. ಇದು ಕೇವಲ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ಯೋಜನೆಗಳಿಗೆ ಮಾತ್ರ ಅನ್ವಯಿಸುತ್ತದೆ.

**ಶ್ರೀ ಕೆ.ಸಿ.ಕೊಂಡಯ್ಯ:-** ಇದು ಖಾಸಗಿಯವರಿಗೆ ಅನ್ವಯಿಸುವುದಿಲ್ಲವೇ?

**ಶ್ರೀ ಆರ್.ವಿ.ದೇಶಪಾಂಡೆ:-** ಮಾನ್ಯ ಸಭಾಪತಿಯವರೆ, ಇದು ಖಾಸಗಿಯವರಿಗೆ ಅನ್ವಯಿಸುವುದಿಲ್ಲ. ಒಂದು ವೇಳೆ ನಿಗದಿತ ಅವಧಿ ಮುಗಿದಿಲ್ಲ ಹಾಗೂ ಪರಿಹಾರವನ್ನು ಪಾವತಿಸಲಾಗಿದ್ದರೆ, such land will go back to the Land Bank. If no compensation is paid, the land will go back to the land owners.

**Sri SHARANAPPA MATTUR:-** If that land belong to the Government, then this question does not arise.

**ಶ್ರೀ ಆರ್.ವಿ.ದೇಶಪಾಂಡೆ:-** ಮಾನ್ಯ ಸಭಾಪತಿಗಳೆ, ಉದಾಹರಣೆಗೆ ಎತ್ತಿನಹೊಳೆ ಯೋಜನೆ, ಇದರಲ್ಲಿ ಭೂಸ್ವಾಧೀನ ಮಾಡಿಕೊಳ್ಳಲಾಗಿದೆ. It is in the name of the Government. Here the Government is the Land Owner. Here land acquisition is for State Government, Government of India projects and PP projects, where ownership of the land after acquisition will be with the State Government. And it is not for private.

**ಶ್ರೀ ಪಿ.ಆರ್.ರಮೇಶ್:-** ಮಾನ್ಯ ಸಭಾಪತಿಗಳೆ, ಸೆಕ್ಷನ್ 101ರಲ್ಲಿ 'Return of unutilised land' ಎಂದು ಇದೆ. ಇದರಲ್ಲಿ *"when any land acquired under this Act remains unutilised for a period of five years from the date of taking over the possession."* ಎಂದು ಇದೆ. Possession ಅನ್ನುವುದಕ್ಕಿಂತ ನೋಟಿಫಿಕೇಶನ್ ಮಾಡಿದಂತಹ ದಿನಾಂಕದಿಂದ 5 ವರ್ಷ ಎಂದು ಮಾಡಿದರೆ

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

ಒಳ್ಳೆಯದು. ಕಾರಣ ಏನೆಂದರೆ, possession ತೆಗೆದುಕೊಳ್ಳುವುದಕ್ಕೆ, there is so much of land acquisition proceedings. It may take long time.

(ಮುಂದು)

(65)14-02-2019(11-30)ಬಿಎಸ್‌ಡಿ-ಎಂಡಿ

**ಶ್ರೀ ಪಿ.ಆರ್. ರಮೇಶ್ (ಮುಂದು)**

ಆ ವಿಷಯವು ನ್ಯಾಯಾಲಯದಲ್ಲಿ ಇರಬಹುದು ಅಥವಾ ಮತ್ತೊಂದು ತಗಾದೆಯಲ್ಲಿ ಇರಬಹುದು. ಆದ್ದರಿಂದ possession ತೆಗೆದುಕೊಳ್ಳುವುದಕ್ಕೆ ಮುಂಚೆಯೇ there is a duration. ಅಂದರೆ ಆಗಲೇ ಐದಾರು ವರ್ಷಗಳು ಆಗಿರುತ್ತದೆ, possession ತೆಗೆದುಕೊಂಡ ನಂತರ ಮುಂದಿನ 5 ವರ್ಷಗಳು ಕಳೆದು ಹೋದರೂ ಆ ಯೋಜನೆಯನ್ನು ಮಾಡಲಿಲ್ಲ ಎಂದರೆ ತಪ್ಪಾಗುತ್ತದೆ.

**ಶ್ರೀ ಆರ್.ವಿ. ದೇಶಪಾಂಡೆ:-** ಮಾನ್ಯ ಸಭಾಪತಿಯವರೇ, ಖಾಸಗಿ ಜನರು ಮಾಡಿದರೆ ಸ್ವಲ್ಪ ಭಯ ಇರುತ್ತದೆ. ಆದರೆ ಸರ್ಕಾರವು ಭೂಮಿಯನ್ನು ತೆಗೆದುಕೊಳ್ಳುತ್ತದೆ, then the Government is the custodian of it. Government will definitely consider about the welfare. ಹಾಗಾಗಿ ಸರ್ಕಾರವೇ ಭೂಮಿಯನ್ನು ತೆಗೆದುಕೊಂಡು ಯೋಜನೆ ಆಗಿಲ್ಲವೆಂದರೆ, if the compensation is paid, then it will go back to the Land Bank. If the compensation is not paid, then the land will go back to the Land Owners. Why should we worry about it? I don't think this is required.

**ಶ್ರೀ ಪಿ.ಆರ್.ರಮೇಶ್:-** ಮಾನ್ಯ ಸಭಾಪತಿಯವರೇ, ಅವರು relinquish ಮಾಡಿ volunteer ಆಗಿ ಕೊಟ್ಟಿರುವುದು ಬರುತ್ತದೆ.

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೇ, It is very clear in section 10-A. ಅದರ ಬಗ್ಗೆ ಮಾನ್ಯ ಮಂತ್ರಿಯವರು ಬಹಳ ವಿವರವಾದ ವಿವರಣೆ ಕೊಟ್ಟಿದ್ದಾರೆ. These are all concerned with the Government projects. ಇದರಲ್ಲಿ ಶೈಕ್ಷಣಿಕ ಸಂಸ್ಥೆಗಳು, ಆಸ್ಪತ್ರೆಗಳು, ಸ್ವಯಂ ಆಡಳಿತ ಕಛೇರಿಗಳು, ವಿದ್ಯುದೀಕರಣ ಇತ್ಯಾದಿ ಕೆಲಸಗಳಿಗೆ ಇಷ್ಟೊಂದು ಷರತ್ತುಗಳನ್ನು ಹಾಕಿದರೆ ಹೇಗೆ?

"ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**Sri IVAN D'SOUZA:-** Sir, We welcome this bill.

**ಸಭಾಪತಿಯವರು:–** ಪ್ರಸ್ತಾವ ಏನೆಂದರೆ;

“ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2019ರ ಭೂ ಸ್ವಾಧೀನ, ಪುನರ್ವಸತಿ ಮತ್ತು ಪುನರ್ವ್ಯವಸ್ಥೆಯಲ್ಲಿ ನ್ಯಾಯಯುತ ಪರಿಹಾರ ಮತ್ತು ಪಾರದರ್ಶಕತೆ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು”

***ಪ್ರಸ್ತಾವ ಅಂಗೀಕರಿಸಲ್ಪಟ್ಟಿತು***

ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು

***ಖಂಡ 2ರಿಂದ 13ರವರೆಗೆ***

**ಸಭಾಪತಿಯವರು:** “ಖಂಡ 2ರಿಂದ 13ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ”

***ಪ್ರಸ್ತಾವ ಅಂಗೀಕರಿಸಲ್ಪಟ್ಟಿತು***

(ಖಂಡ 2ರಿಂದ 13ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

***ಖಂಡ 1 ಇತ್ಯಾದಿ***

**ಸಭಾಪತಿಯವರು:** ಪ್ರಸ್ತಾವ ಏನೆಂದರೆ;

“ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ”

***ಪ್ರಸ್ತಾವ ಅಂಗೀಕರಿಸಲ್ಪಟ್ಟಿತು***

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

“ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

***ಪ್ರಸ್ತಾವದ ಅಂಗೀಕಾರ***

**ಶ್ರೀ ಆರ್.ವಿ.ದೇಶಪಾಂಡೆ (ಕಂದಾಯ ಸಚಿವರು):-** ಮಾನ್ಯ ಸಭಾಪತಿಯವರೆ, ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2019ರ ಭೂ ಸ್ವಾಧೀನ, ಪುನರ್ವಸತಿ ಮತ್ತು ಪುನರ್ವ್ಯವಸ್ಥೆಯಲ್ಲಿ ನ್ಯಾಯಯುತ ಪರಿಹಾರ ಮತ್ತು ಪಾರದರ್ಶಕತೆ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:** ಪ್ರಸ್ತಾವ ಏನೆಂದರೆ;

> "ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2019ರ ಭೂ ಸ್ವಾಧೀನ, ಪುನರ್ವಸತಿ ಮತ್ತು ಪುನರ್ವ್ಯವಸ್ಥೆಯಲ್ಲಿ ನ್ಯಾಯಯುತ ಪರಿಹಾರ ಮತ್ತು ಪಾರದರ್ಶಕತೆ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

***ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು***

**ಆ) ಬಸವಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ, 2019**

***ಪರ್ಯಾಲೋಚನಾ ಪ್ರಸ್ತಾವ***

**ಶ್ರೀ ಆರ್.ವಿ.ದೇಶಪಾಂಡೆ (ಕಂದಾಯ ಸಚಿವರು):-** ಮಾನ್ಯ ಸಭಾಪತಿಯವರೆ, ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2019ರ ಬಸವಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಆರ್.ವಿ. ದೇಶಪಾಂಡೆ(ಕಂದಾಯ ಸಚಿವರು):-** ಮಾನ್ಯ ಸಭಾಪತಿಯವರೇ, ಬಸವಕಲ್ಯಾಣ ಅಭಿವೃದ್ಧಿ ಮಂಡಳಿಯು 2005ನೇ ಇಸವಿಯಲ್ಲಿ ಸ್ಥಾಪನೆಯಾಗಿದ್ದು, ಮುಖ್ಯವಾಗಿ ಬಸವ ಕಲ್ಯಾಣ ಟೌನ್‌ನಲ್ಲಿರುವ Heritage Buildings and Heritage Sites ನ ನಿರ್ವಹಣೆಗೆ ರಚನೆಯಾಗಿದೆ. As per section 22 Basavakalyan Urban Development Authority ಎಂದಾಯಿತು. ಆದರೆ ಮುಂದೆ ಏನು confusion ಹಾಗೂ ತೊಂದರೆ

" ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

ಆಯಿತೆಂದರೆ, ಯಾವುದೋ ಒಂದು ಮನೆ ಕಟ್ಟಿಸಬೇಕಾದಾಗ ಜನರು ಅನುಮತಿಗಾಗಿ Basavakalyana Development Board ಗೆ ಬರುವ ಸನ್ನಿವೇಶ ನಿರ್ಮಾಣವಾಯಿತು. ಅಲ್ಲಿನ ಸ್ಥಳೀಯ ಜನರು ಬಹಳ ವರ್ಷಗಳಿಂದ ಕೇಳುವುದೇನೆಂದರೆ, Basavakalyan Urban Development Authority ಮಾಡಿದ ನಂತರ ಮನೆ ಕಟ್ಟಲು ಇತ್ಯಾದಿಗಳಿಗೆ ಅನುಮತಿಯನ್ನು ಪ್ರಾಧಿಕಾರದಲ್ಲಿಯೇ ತೆಗೆದುಕೊಳ್ಳಬೇಕೆ ಹೊರತು ಬೋರ್ಡ್ ಕಡೆ ಏಕೆ ಹೋಗಬೇಕು ಎಂಬ ಪ್ರಶ್ನೆ ಕೇಳುತ್ತಿದ್ದಾರೆ. ಹಾಗಾಗಿ ಅಲ್ಲಿನ Heritage Buildings, ಅವಶೇಷ ಇದ್ದರೆ ಅವುಗಳನ್ನು ರಕ್ಷಣೆ ಮಾಡಲು ಬೋರ್ಡ್‌ಗೆ ಅಧಿಕಾರವನ್ನು ಕೊಟ್ಟಿದ್ದೇವೆ. ಬೆಳಗಾವಿ, ಮಂಗಳೂರು ಮತ್ತಿತರ ಪ್ರದೇಶಗಳಲ್ಲಿ ಮಾಡಿರುವಂತೆ ಇಲ್ಲಿಯೂ ಮಾಡಲು ಒಂದು ಸಣ್ಣ ತಿದ್ದುಪಡಿಯನ್ನು ತಂದಿದ್ದೇವೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶಿತರು):–** ಮಾನ್ಯ ಸಭಾಪತಿಯವರೇ, ಮಾನ್ಯ ಕಂದಾಯ ಸಚಿವರು ತಂದಿರುವ ಈ ತಿದ್ದುಪಡಿ ಬಹಳ ಅವಶ್ಯಕವಾಗಿದೆ, ಆ ಭಾಗದಲ್ಲಿ Heritage Buildings ಕಾಪಾಡಲು Basavakalyana Development Board ಇದ್ದು, ಈಗ Basavakalyan Urban Development Authority ಬಂದಿರುವುದರಿಂದ ಆ ಪ್ರದೇಶದ ಅಭಿವೃದ್ಧಿಗೆ ಕಾರಣವಾಗುತ್ತದೆ. ಇಲ್ಲದಿದ್ದರೆ ಆ ಪ್ರದೇಶದಲ್ಲಿ ನಿವೇಶನ ಮಾಡುವುದು, ಮನೆ ಕಟ್ಟುವುದು ಇತ್ಯಾದಿ ವಿಷಯಗಳಿಗೆ ಸಂಬಂಧಪಟ್ಟಂತೆ dual act ಮಾಡಿದಂತಾಗುತ್ತದೆ. ಹಾಗಾಗಿ I welcome this amendment. ಇದೊಂದು ಉಪಯುಕ್ತ ತಿದ್ದುಪಡಿಯಾಗಿದ್ದು, ಇದನ್ನು ತಂದಿರುವ ಮಾನ್ಯ ಸಚಿವರು ಹಾಗೂ ಸರ್ಕಾರವನ್ನು ನಾನು ಅಭಿನಂದಿಸುತ್ತೇನೆ.

**ಸಭಾಪತಿಯವರು:** ಪ್ರಸ್ತಾವ ಏನೆಂದರೆ;

"ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2019ರ ಬಸವಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

***<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು</u>***

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು**

***ಖಂಡ 2ರಿಂದ 4ರವರೆಗೆ***

**ಸಭಾಪತಿಯವರು:** "ಖಂಡ 2ರಿಂದ 4ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

***ಪ್ರಸ್ತಾವ ಅಂಗೀಕರಿಸಲ್ಪಟ್ಟಿತು***

(ಖಂಡ 2ರಿಂದ 4ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

"ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

***ಖಂಡ 1 ಇತ್ಯಾದಿ***

**ಸಭಾಪತಿಯವರು:** ಪ್ರಸ್ತಾವ ಏನೆಂದರೆ;

“ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ”

***ಪ್ರಸ್ತಾವ ಅಂಗೀಕರಿಸಲ್ಪಟ್ಟಿತು***

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

***ಪ್ರಸ್ತಾವದ ಅಂಗೀಕಾರ***

**ಶ್ರೀ ಆರ್.ವಿ. ದೇಶಪಾಂಡೆ (ಕಂದಾಯ ಸಚಿವರು):–** ಮಾನ್ಯ ಸಭಾಪತಿಯವರೆ, ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2019ರ ಬಸವಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:** ಪ್ರಸ್ತಾವ ಏನೆಂದರೆ;

“ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2019ರ ಬಸವಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು”

***ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು***

**ಶ್ರೀ ಐವನ್ ಡಿ’ಸೋಜಾ:–** ಮಾನ್ಯ ಸಭಾಪತಿಯವರೇ, ಪ್ರತಿ ಪಕ್ಷದ ಸಾಲಿನಲ್ಲಿನ ಎಲ್ಲಾ ಸ್ಥಾನಗಳು ಖಾಲಿ ಇವೆ. ಬಿ.ಜೆ.ಪಿ. ಸದಸ್ಯರು ನಿನ್ನೆ ಬಾವಿಯಲ್ಲಿದ್ದರು, ಇವತ್ತು ಎಲ್ಲಿ ಹೋಗಿದ್ದಾರೆ ಎಂಬ ಬಗ್ಗೆ ಅವರೇನಾದರೂ ತಮ್ಮ ಗಮನಕ್ಕೆ ತಂದಿದ್ದಾರೆಯೇ?

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

## ಇ) ಕರ್ನಾಟಕ ಋಣ ಪರಿಹಾರ ವಿಧೇಯಕ, 2018

### ಪರ್ಯಾಲೋಚನಾ ಪ್ರಸ್ತಾವ

**ಶ್ರೀ ಬಂಡೆಪ್ಪ ಖಾಶೆಂಪೂರ್(ಸಹಕಾರ ಸಚಿವರು):–** ಮಾನ್ಯ ಸಭಾಪತಿಯವರೆ, ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2018ರ ಕರ್ನಾಟಕ ಋಣ ಪರಿಹಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

***ಪ್ರಸ್ತಾವವನ್ನು ಮಂಡಿಸಲಾಯಿತು***

*(ಮುಂದು)*

**(66)14–02–2019(11–40)ಹೆಚ್‌ವಿ–ಎಕೆ**

**ಶ್ರೀ ಬಂಡೆಪ್ಪ ಖಾಶೆಂಪೂರ(ಸಹಕಾರ ಸಚಿವರು):–** ಸನ್ಮಾನ್ಯ ಸಭಾಪತಿಯವರೇ, ಇದೊಂದು ಐತಿಹಾಸಿಕ ವಿಧೇಯಕವೆಂದು ಹೇಳುವುದಕ್ಕೆ ಬಯಸುತ್ತಿದ್ದೇನೆ. 1976ರಲ್ಲಿ ಮಾನ್ಯ ದೇವರಾಜ ಅರಸುರವರು ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಇಂತಹ ಒಂದು ವಿಧೇಯಕವನ್ನು ತರಲಾಗಿತ್ತು. ನಂತರ 1980ರಲ್ಲಿ ಅತಿವೃಷ್ಠಿ, ಅನಾವೃಷ್ಠಿಗಳಂತಹ ಪ್ರಕೃತಿ ವಿಕೋಪಗಳ ಕಾರಣದಿಂದಾಗಿ ಭೂರಹಿತ ರೈತರು, ಸಣ್ಣ ರೈತರು ಮತ್ತು ದುರ್ಬಲ ವರ್ಗಕ್ಕೆ ಸೇರಿದಂತಹ ಜನರು ಬಹಳಷ್ಟು ಕಡೆಗಳಿಂದ ಸಾಲವನ್ನು ಪಡೆದುಕೊಂಡು, ಅದನ್ನು ಮರು ಪಾವತಿ ಮಾಡುವುದಕ್ಕೆ ಸಾಧ್ಯವಾಗದೇ ಕಷ್ಟಪಡುತ್ತಿದ್ದಾರೆ. ಸದರಿ ವಿಧೇಯಕವನ್ನು ಸಚಿವ ಸಂಪುಟದ ಅನುಮೋದನೆ ಪಡೆದುಕೊಂಡು ರಾಷ್ಟ್ರಪತಿಗಳ ಅಂಕಿತಕ್ಕಾಗಿ ಕಳುಹಿಸಿಕೊಡಲಾಗಿದೆ. ಇದೊಂದು ಬಹಳ ಮಹತ್ವಪೂರ್ಣವಾಗಿರುವ ವಿಧೇಯಕವಾಗಿದೆ. ಈ ರಾಜ್ಯದ ರೈತರ ಪರವಾಗಿ ಮತ್ತು ಎಲ್ಲ ಜನತೆಯ ಪರವಾಗಿ ಈ ವಿಧೇಯಕವನ್ನು ಅಂಗೀಕರಿಸಬೇಕೆಂದು ವಿನಂತಿ ಮಾಡಿಕೊಳ್ಳುತ್ತಿದ್ದೇನೆ.

**(ಈ ಹಂತದಲ್ಲಿ ಭಾರತೀಯ ಜನತಾ ಪಕ್ಷದ ಸದಸ್ಯರು ಸದನವನ್ನು ಪ್ರವೇಶಿಸಿದರು. ಮಾನ್ಯ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ ಉಳಿದ ಎಲ್ಲ ಭಾರತೀಯ ಜನತಾ ಪಕ್ಷದ ಸದಸ್ಯರು, 'ಬೇಕೇಬೇಕು ನ್ಯಾಯ ಬೇಕು', 'ಬೇಕೇಬೇಕು ರಕ್ಷಣೆ ಬೇಕು' ಎಂದು ಘೋಷಣೆಗಳನ್ನು ಕೂಗುತ್ತಾ ಸದನದ ಬಾವಿಗಿಳಿದು ಧರಣಿಯಲ್ಲಿ ನಿರತರಾದರು.)**

**(ಗೊಂದಲ)**

**ಶ್ರೀ ಕೆ.ಟಿ.ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ):–** ಸನ್ಮಾನ್ಯ ಸಭಾಪತಿಯವರೇ, ಕರ್ನಾಟಕ ಋಣ ಪರಿಹಾರ ವಿಧೇಯಕ 2018 ಒಂದು ಕ್ರಾತಿಕಾರಕ ಮಸೂದೆಯಾಗಿದೆ.

**(ಗೊಂದಲ)**

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

**ಸಭಾಪತಿಯವರು:–** ವಿರೋಧ ಪಕ್ಷದ ಸದಸ್ಯರು ಈ ರೀತಿ ವರ್ತಿಸಬಾರದು. ವಿಧೇಯಕಗಳ ಅಂಗೀಕಾರ ಮಾಡಲು ಅವಕಾಶವನ್ನು ಮಾಡಿಕೊಡಬೇಕಾಗುತ್ತದೆ. ಅದನ್ನು ಬಿಟ್ಟು ರಾಜಕಾರಣ ಮಾಡುವುದು ಸರಿಯಲ್ಲ. ಇದು ರಾಜಕಾರಣದ ವೇದಿಕೆಯಲ್ಲ. ರಾಜ್ಯದಲ್ಲಿ ಬಹಳಷ್ಟು ಸಮಸ್ಯೆಗಳಿವೆ. ಅವುಗಳ ಬಗ್ಗೆ ಚರ್ಚೆ ಆಗಬೇಕಾಗಿದೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):–** ಸನ್ಮಾನ್ಯ ಸಭಾಪತಿಯವರೇ, ನಮ್ಮ ಭಾಗದ ಸದಸ್ಯರು ಸದನದ ಬಾವಿಯಲ್ಲಿರುವಂತಹ ಸಂದರ್ಭದಲ್ಲಿ ವಿಧೇಯಕಗಳನ್ನು ಅಂಗೀಕರಿಸುವುದು ಸರಿಯಲ್ಲ.

**(ಗೊಂದಲ)**

**ಶ್ರೀ ಕೆ.ಟಿ.ಶ್ರೀಕಂಠೇಗೌಡ:–** ಸನ್ಮಾನ್ಯ ಸಭಾಪತಿಯವರೇ, ಅವರುಗಳು ತಮ್ಮ ತಮ್ಮ ಸ್ಥಾನಗಳಿಗೆ ಮರಳಿ ಕುಳಿತುಕೊಳ್ಳಲಿ.

**(ಗೊಂದಲ)**

**ಸಭಾಪತಿಯವರು:–** ವಿಧೇಯಕಗಳನ್ನು ಅಂಗೀಕರಿಸುವುದಕ್ಕೆ ಬಿಡದೇ ಈ ರೀತಿ ಗಲಾಟೆ ಮಾಡಿದರೆ ಎಲ್ಲ ಸಮಸ್ಯೆಗಳು ಪರಿಹಾರವಾಗುತ್ತವೆಯೇ? ಅವರುಗಳು ಕುಳಿತುಕೊಳ್ಳುವುದು ಬೇಡ ಕುಣಿಯಲಿ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:–** ಸನ್ಮಾನ್ಯ ಸಭಾಪತಿಯವರೇ, ನಾವು ಏನು ಮಾಡಬೇಕೆನ್ನುವುದನ್ನು ತಾವೇ ಹೇಳಬೇಕಾಗಿದೆ. ನ್ಯಾಯವನ್ನು ಕೇಳುವುದೇ ತಪ್ಪೇ? **[XXX] ದಲ್ಲಿ** ಒಬ್ಬ ಶಾಸಕರ ಮೇಲಾಗಿರುವ ಹಲ್ಲೆಯ ಬಗ್ಗೆ ಚರ್ಚೆ ಮಾಡುವುದಕ್ಕೆ ಬಿಡುವುದಿಲ್ಲವೆಂದರೆ ನಾವೇನು ಮಾಡಬೇಕು?

**(ಗೊಂದಲ)**

**Sri R.V. DESHPANDE:** Mr. Chairman Sir, I object to the word **[XXX]** …*(Interruptions)* I object to the word **[XXX]**.

**(ಗೊಂದಲ)**

---

**[XXX]** ಸಭಾಪತಿಯವರ ಆಜ್ಞಾನುಸಾರ ಕಡತದಿಂದ ತೆಗೆದುಹಾಕಲಾಗಿದೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಸಭಾಪತಿಯವರು:–** ಏನು ಮಾಡಬೇಕು ಎಂದರೆ, ಕಲಾಪವನ್ನು ನಡೆಯುವುದಕ್ಕೆ ಬಿಡಿ. ಅದಕ್ಕಿಂತ ಹೆಚ್ಚಿಗೆ ನಾನು ನಿಮ್ಮನ್ನು ಏನೂ ಕೇಳುವುದಿಲ್ಲ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:–** ಸನ್ಮಾನ್ಯ ಸಭಾಪತಿಯವರೇ, ಶಾಸಕರೊಬ್ಬರ ಮನೆಗೆ ನುಗ್ಗಿ ಗಲಾಟೆ ಮಾಡಿ, ಅವರ ಮೇಲೆ ಹಲ್ಲೆ ನಡೆಸಿರುವುದು ಯಾವ ನ್ಯಾಯ?

**(ಗೊಂದಲ)**

**ಸಭಾಪತಿಯವರು:–** ಪ್ರಸ್ತಾವ ಏನೆಂದರೆ;

**"ವಿಧಾನಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ 2018ನೇ ಸಾಲಿನ ಕರ್ನಾಟಕ ಋಣ ಪರಿಹಾರ ವಿಧೇಯಕವನ್ನು ಪರ್ಯಾಲೋಚಿಸುವುದು."**

**<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು</u>**

**<u>ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು</u>**

**<u>ಖಂಡ 2 ರಿಂದ 18ರವರೆಗೆ</u>**

**ಸಭಾಪತಿಯವರು:–** ಖಂಡ 2ರಿಂದ 18ರವರೆಗೆ ಎರಡೂ ಸೇರಿದಂತೆ ವಿಧೇಯಕದ ಅಂಗವಾಗಿರುತ್ತದೆ.

**<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು</u>**

**(ಖಂಡ 2 ರಿಂದ 18ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು.)**

**<u>ಖಂಡ 1 ಇತ್ಯಾದಿ</u>**

**ಸಭಾಪತಿಯವರು:–** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು</u>**

**(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)**

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**(ಸದನದ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾ ಪಕ್ಷದ ಸದಸ್ಯರು "ಬೇಕೇಬೇಕು ನ್ಯಾಯ ಬೇಕು" "ಪ್ರಜಾಪ್ರಭುತ್ವ ವಿರೋಧಿ ಸರ್ಕಾರಕ್ಕೆ ಧಿಕ್ಕಾರ" ಎನ್ನುವ ಘೋಷಣೆಗಳನ್ನು ಕೂಗಿದರು)**

**ಪ್ರಸ್ತಾವದ ಅಂಗೀಕಾರ**

**ಶ್ರೀ ಬಂಡೆಪ್ಪ ಖಾಶೆಂಪೂರ(ಸಹಕಾರ ಸಚಿವರು):-** ಸನ್ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2018ನೇ ಸಾಲಿನ ಕರ್ನಾಟಕ ಋಣ ಪರಿಹಾರ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರುಃ-** ಪ್ರಸ್ತಾವ ಏನೆಂದರೆ;

> "ವಿಧಾನಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2018ನೇ ಸಾಲಿನ ಕರ್ನಾಟಕ ಋಣ ಪರಿಹಾರ ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.**

**(ಗೊಂದಲ)**

**ಶ್ರೀ ಆರ್.ವಿ.ದೇಶಪಾಂಡೆ(ಕಂದಾಯ ಸಚಿವರು):-** ಸನ್ಮಾನ್ಯ ಸಭಾಪತಿಯವರೇ, ಮಾನ್ಯ ವಿರೋಧ ಪಕ್ಷದ ನಾಯಕರು ಮಾತನಾಡುತ್ತಿದ್ದ ಸಂದರ್ಭದಲ್ಲಿ **[XXX]** ಎನ್ನುವ ಪದ ಬಳಕೆ ಮಾಡಿದ್ದಾರೆ. ಈ ಸರ್ಕಾರ ಸಂವಿಧಾನದ ಪ್ರಕಾರ ಸ್ಥಾಪನೆಯಾಗಿದೆ. ಆ ಪ್ರಕಾರವಾಗಿಯೇ ಸರ್ಕಾರ ಕೆಲಸ ಮಾಡುತ್ತಿದೆ. ದಯಮಾಡಿ ಆ ಪದಗಳನ್ನು ಕಡತದಿಂದ ತೆಗೆಸಬೇಕೆನ್ನುವುದು ನಮ್ಮ ಮನವಿಯಾಗಿದೆ.

**(ಗೊಂದಲ)**

---

**[XXX] ಸಭಾಪತಿಯವರ ಆಜ್ಞಾನುಸಾರ ಕಡತದಿಂದ ತೆಗೆದುಹಾಕಲಾಗಿದೆ.**

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**ಡಾ:ಜಯಮಾಲ(ಸಭಾ ನಾಯಕರು):–** ಸನ್ಮಾನ್ಯ ಸಭಾಪತಿಯವರೇ, ದಯಮಾಡಿ ಆ ಪದಗಳು ಕಡತಕ್ಕೆ ಹೋಗಬಾರದು.

**(ಗೊಂದಲ)**

**ಸಭಾಪತಿಯವರುಃ–** ಸದನದ ಬಾವಿಯೊಳಗೆ ಧರಣಿ ನಿರತರಾಗಿರುವ ಸದಸ್ಯರು ಏನು ಮಾತನಾಡಿದರು ಅದು ಕಡತಕ್ಕೆ ಹೋಗುವುದಿಲ್ಲ.

**(ಗೊಂದಲ)**

**(ಸದನದ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾ ಪಕ್ಷದ ಸದಸ್ಯರು “ಶಾಸಕರ ಮೇಲೆ ದೌರ್ಜನ್ಯ ಎಸಗುವ ಸರ್ಕಾರಕ್ಕೆ ಧಿಕ್ಕಾರ” “ಶಾಸಕರಿಗೆ ರಕ್ಷಣೆ ಕೊಡದೇ ಇರುವ ಸರ್ಕಾರಕ್ಕೆ ಧಿಕ್ಕಾರ” ಎನ್ನುವ ಘೋಷಣೆಗಳನ್ನು ಕೂಗುತ್ತಿದ್ದರು.)**

**(ಗೊಂದಲ)**

**ಸಭಾಪತಿಯವರುಃ–** ವಿರೋಧ ಪಕ್ಷದ ಸದಸ್ಯರಿಗೆ ಸುಗಮ ಕಲಾಪವನ್ನು ತಡೆಯುವುದರಲ್ಲಿ ಸುಖ–ಸಂತೋಷ ಸಿಗುವುದಾದರೆ ಅವರು ಅದನ್ನೇ ಮಾಡಲಿ, ನನ್ನ ಅಭ್ಯಂತರವೇನು ಇಲ್ಲ.  ಈಗ ಮುಂದಿನ ವಿಧೇಯಕವನ್ನು ತೆಗೆದುಕೊಳ್ಳೋಣ.

**ಈ) <u>ಎನ್.ಐ.ಇ. ವಿಶ್ವವಿದ್ಯಾಲಯ ವಿಧೇಯಕ, 2019</u>**

**<u>ಪರ್ಯಾಲೋಚನಾ ಪ್ರಸ್ತಾವ</u>**

**ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು):–** ಸನ್ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ನೇ ಸಾಲಿನ ಎನ್.ಐ.ಇ. ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**<u>ಪ್ರಸ್ತಾವವನ್ನು ಮಂಡಿಸಲಾಯಿತು</u>**

**ಸಭಾಪತಿಯವರುಃ–** ಪ್ರಸ್ತಾವ ಏನೆಂದರೆ;

**“ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2019ನೇ ಸಾಲಿನ ಎನ್.ಐ.ಇ. ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸುವುದು.”**

**<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು</u>**

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”

**(ಗೊಂದಲ)**

**ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು**

**ಖಂಡ 2 ರಿಂದ 62ರವರೆಗೆ**

**ಸಭಾಪತಿಯವರು:-** ಖಂಡ 2ರಿಂದ 62ರವರೆಗೆ ಎರಡೂ ಸೇರಿದಂತೆ ವಿಧೇಯಕದ ಅಂಗವಾಗಿರುತ್ತದೆ.

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಖಂಡ 2 ರಿಂದ 62ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು.)**

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

**"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು.)**

**(ಗೊಂದಲ)**

**ಪ್ರಸ್ತಾವದ ಅಂಗೀಕಾರ**

**ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು):-** ಸನ್ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ನೇ ಸಾಲಿನ ಎನ್.ಐ.ಇ. ವಿಶ್ವವಿದ್ಯಾಲಯ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು

**(ಸದನದ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾ ಪಕ್ಷದ ಸದಸ್ಯರು “ಜನಪ್ರತಿನಿಧಿಗಳಿಗೆ ರಕ್ಷಣೆ ಕೊಡದ ಸರ್ಕಾರಕ್ಕೆ ಧಿಕ್ಕಾರ” “ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುತ್ತಿರುವ ಸರ್ಕಾರಕ್ಕೆ ಧಿಕ್ಕಾರ” ಎನ್ನುವ ಘೋಷಣೆಗಳನ್ನು ಕೂಗುತ್ತಿದ್ದರು)**

**ಸಭಾಪತಿಯವರುಃ-** ಪ್ರಸ್ತಾವ ಏನೆಂದರೆ;

**“ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ನೇ ಸಾಲಿನ ಎನ್.ಐ.ಇ. ವಿಶ್ವವಿದ್ಯಾಲಯ ವಿಧೇಯಕವನ್ನು ಅಂಗೀಕರಿಸುವುದು.”**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.**

**(ಗೊಂದಲ)**

**ಡಾ॥ ವೈ.ಎ.ನಾರಾಯಣಸ್ವಾಮಿ(ಸದನದ ಬಾವಿಯೊಳಗಿನಿಂದ):-** ಸನ್ಮಾನ್ಯ ಸಭಾಪತಿಯವರೇ, House is not in order.

**Mr. CHAIRMAN:** You are not in order.

**ಡಾ॥ ವೈ.ಎ.ನಾರಾಯಣಸ್ವಾಮಿ (ಸದನದ ಬಾವಿಯೊಳಗಿನಿಂದ):-** ಸನ್ಮಾನ್ಯ ಸಭಾಪತಿಯವರೇ, ಇದು ಸರಿಯೇ?

**ಸಭಾಪತಿಯವರುಃ-** ಸುಮ್ಮನಿರಿ, ಸದನವನ್ನು ನಡೆಸುವುದಕ್ಕೆ ಬಿಡಿ. ಏನು ಸರಿ ಎನ್ನುವುದನ್ನು ಹೇಳಿ, ಗಲಾಟೆ ಮಾಡುವುದು ಸರಿಯೇ?

**(ಗೊಂದಲ)**

**ಶ್ರೀ ಆರ್.ವಿ.ದೇಶಪಾಂಡೆ(ಕಂದಾಯ ಸಚಿವರು):-** ಸನ್ಮಾನ್ಯ ಸಭಾಪತಿಯವರೇ, ನಾವು ಸಹ ವಿರೋಧ ಪಕ್ಷದ ಸದಸ್ಯರಲ್ಲಿ ಮನವಿ ಮಾಡಿಕೊಳ್ಳುತ್ತಿದ್ದೇವೆ. ವಿಧೇಯಕಗಳ ಮೇಲೆ ಚರ್ಚೆ ಮಾಡಿ ಅಂಗೀಕಾರ ಮಾಡಬೇಕಾಗಿದೆ. ಆದ್ದರಿಂದ ಅವರುಗಳು ತಮ್ಮ ತಮ್ಮ ಸ್ಥಾನಕ್ಕೆ ಮರಳಿ, ಸದನದ ಕಾರ್ಯಕಲಾಪಗಳು ನಡೆಯುವುದಕ್ಕೆ ಅನುವು ಮಾಡಿಕೊಡಬೇಕೆಂದು ವಿನಂತಿ ಮಾಡುತ್ತಿದ್ದೇನೆ.

**(ಗೊಂದಲ)**

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

## ಉ)ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ, 2019

### ಪರ್ಯಾಲೋಚನಾ ಪ್ರಸ್ತಾವ

**ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು):–** ಸನ್ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

### ಪ್ರಸ್ತಾವವನ್ನು ಮಂಡಿಸಲಾಯಿತು

**ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು):–** ಸನ್ಮಾನ್ಯ ಸಭಾಪತಿಯವರೇ, ಮೈಸೂರು ವಿಶ್ವವಿದ್ಯಾನಿಲಯದಿಂದ ಸರ್ಕಾರಿ ಕಾಲೇಜು(ಸ್ವಾಯುತ್ತ), ಮಂಡ್ಯ ಈ ಸಂಸ್ಥೆಯನ್ನು ಪ್ರತ್ಯೇಕಗೊಳಿಸುವ ಮೂಲಕ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯನ್ನು ವಿಸ್ತರಿಸುವುದರೊಂದಿಗೆ ಮಂಡ್ಯದಲ್ಲಿ ಕೇಂದ್ರಸ್ಥಾನವನ್ನು ಹೊಂದಿರುವ ಏಕಾತ್ಮಕ ಸ್ವರೂಪದ ಮಂಡ್ಯ ವಿಶ್ವವಿದ್ಯಾನಿಲಯ, ಮಂಡ್ಯ ಇದನ್ನು ಸ್ಥಾಪಿಸಲಾಗುತ್ತಿದೆ. ಇದನ್ನು ವಿಶ್ವವಿದ್ಯಾನಿಲಯವಾಗಿ ಅಂಗೀಕರಿಸಬೇಕೆನ್ನುವುದು ನನ್ನ ಮನವಿಯಾಗಿದೆ.

**(ಗೊಂದಲ)**

**ಶ್ರೀ ಕೆ.ಟಿ.ಶ್ರೀಕಂಠೇಗೌಡ(ಪದವೀಧರರ ಕ್ಷೇತ್ರ):–** ಸನ್ಮಾನ್ಯ ಸಭಾಪತಿಯವರೇ, ಭಾರತ ದೇಶದ ಜ್ಞಾನ ಆಯೋಗಕ್ಕೆ ಯು.ಜಿ.ಸಿ.ಯವರು ಕ್ಲಸ್ಟರ್ ಹಾಗೂ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾನಿಲಯದ ಸ್ಥಾಪನೆಗೆ ಶಿಫಾರಸ್ಸು ಮಾಡಿದ್ದು, ಬಹುಶಃ ಮಂಡ್ಯದ ವಿಶ್ವವಿದ್ಯಾನಿಲಯವು ದೇಶದ ಆರು ವಿಶ್ವವಿದ್ಯಾನಿಲಯಗಳಲ್ಲಿ ಒಂದಾಗಿದ್ದು, ಕ್ಲಸ್ಟರ್ ಆಧಾರಿತ ವಿಶ್ವವಿದ್ಯಾನಿಲಯಗಳಲ್ಲಿ ಒಂದಾಗಿದೆ. ದೇಶದ ಬೇರೆ ರಾಜ್ಯಗಳಲ್ಲಿ ಈಗಾಗಲೇ ಈ ಬಗ್ಗೆ ಕಾಯಿದೆ ಮಾಡಿ, ವಿಶ್ವವಿದ್ಯಾನಿಲಯಗಳನ್ನು ಪ್ರಾರಂಭ ಮಾಡಿದ್ದಾರೆ. ನಮ್ಮ ರಾಜ್ಯದವರು ತಡವಾಗಿಯಾದರೂ ಈ ಕೆಲಸವನ್ನು ಮಾಡಬೇಕಾಗಿದೆ. ಮಾನ್ಯ ಉನ್ನತ ಶಿಕ್ಷಣ ಸಚಿವರು ಒಳ್ಳೆಯ ಕೆಲಸವನ್ನು ಮಾಡಿದ್ದಾರೆ. ಈ ವಿಧೇಯಕವನ್ನು ನಾನು ಹೃತ್ಪೂರ್ವಕವಾಗಿ ಸ್ವಾಗತಿಸುತ್ತಿದ್ದೇನೆ.

(ಮುಂದುವರಿದಿದೆ)

“ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

(67) 14.02.2019 11.50 ಪಿಕೆ:ಎಕೆ

(ಸಭಾಪತಿಗಳ ಉಪಸ್ಥಿತಿ)

(ಗೊಂದಲ)

ಶ್ರೀ ಪುಟ್ಟಣ್ಣ:- ಮಾನ್ಯ ಸಭಾಪತಿಯವರೇ, ಸೆಂಟ್ರಲ್ ಯುನಿವರ್ಸಿಟಿಯಿಂದ ಮಹಾರಾಣಿ ಕಾಲೇಜು ಮತ್ತು ಮಹಾರಾಣಿ ವಾಣಿಜ್ಯ ಕಾಲೇಜುಗಳನ್ನು ಬೇರ್ಪಡಿಸುತ್ತಿದ್ದಾರೆ. ಸೆಂಟ್ರಲ್ ಯುನಿವರ್ಸಿಟಿಗಳಿಗೆ ಉಳಿದಿರುವ ಕಾಲೇಜುಗಳೆಷ್ಟು? ಈಗಾಗಲೇ ಅವರಲ್ಲಿ ದುಡ್ಡಿಲ್ಲ, ಅವರಿಗೆ ಅನುದಾನವೇ ಇಲ್ಲ. ಈ ರೀತಿಯಾಗಿ ಮಾಡಿಕೊಂಡು ಹೋದರೆ 3 ಯುನಿವರ್ಸಿಟಿಗಳನ್ನು ಮಾಡುವ ಅವಶ್ಯಕತೆ ಏನಿದೆ. ಅಲ್ಲಿ ಹಣಕಾಸು ಇಲ್ಲ, ಶೇಕಡ 80ರಷ್ಟು ಹುದ್ದೆಗಳು ಖಾಲಿ ಇವೆ. ಆ ಶೇಕಡ 80ರಷ್ಟು ಖಾಲಿ ಹುದ್ದೆಗಳನ್ನು ಯಾವಾಗ ತುಂಬುತ್ತಾರೆ ಮತ್ತು ಅನುದಾನವನ್ನು ಹೇಗೆ ಒದಗಿಸುತ್ತಾರೆ?

(ಗೊಂದಲ)

**ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೇ, RUSA fund ಇದೆ. ಇದರಿಂದ ಅನುದಾನವನ್ನು ಒದಗಿಸಿ ಕೊಡುತ್ತೇವೆ. ಹುದ್ದೆಗಳನ್ನು ತುಂಬುವುದಕ್ಕೆ ಎಲ್ಲಾ ಕ್ರಮಗಳನ್ನು ಕೈಗೊಂಡಿದ್ದೇವೆ. ಎಲ್ಲವನ್ನೂ ಮಾಡುತ್ತೇವೆ.

(ಈ ಹಂತದಲ್ಲಿ ಮಾನ್ಯ ಸದಸ್ಯರಾದ ಡಾ:ವೈ.ಎ.ನಾರಾಯಣಸ್ವಾಮಿಯವರು
ಬಾವಿಯೊಳಗೆ ಬಂದರು)

(ಈ ಹಂತದಲ್ಲಿ ಸದನದ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾ ಪಕ್ಷದ ಸದಸ್ಯರು "We want justice", "We want justice" ಎನ್ನುವ ಘೋಷಣೆಗಳನ್ನು ಕೂಗುತ್ತಿದ್ದರು)

ಸಭಾಪತಿಯವರು:- ಪ್ರಸ್ತಾವ ಏನೆಂದರೆ;

"2019ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

**<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು</u>**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು**

**ಖಂಡ 2 ರಿಂದ 21ರವರೆಗೆ**

ಸಭಾಪತಿಯವರು:- "ಖಂಡ 2 ರಿಂದ 21 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ರಿಂದ 21ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

(ಈ ಹಂತದಲ್ಲಿ ಸದನದ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾ ಪಕ್ಷದ ಸದಸ್ಯರು 'ಬೇಕೇಬೇಕು ನ್ಯಾಯ ಬೇಕು', 'ಬೇಕೇಬೇಕು ನ್ಯಾಯ ಬೇಕು', "We want justice", "We want justice" ಎನ್ನುವ ಘೋಷಣೆಗಳನ್ನು ಕೂಗಿದರು.)

**ಪ್ರಸ್ತಾವದ ಅಂಗೀಕಾರ**

**ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2019ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2019ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಊ) ಆದಿಚುಂಚನಗಿರಿ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2019**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ರ ಆದಿಚುಂಚನಗಿರಿ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೇ, ಅಲ್ಲಿನ ಕೆಲವು ಶಿಕ್ಷಣ ಸಂಸ್ಥೆಗಳು ಒಂದು ವಿಶ್ವವಿದ್ಯಾಲಯ ಮಾಡಬೇಕೆಂದು ಮನವಿ ಕೊಟ್ಟಿದ್ದವು. ಅದನ್ನು ಕಾನೂನುಬದ್ಧವಾಗಿ ಮಾಡಬೇಕೆಂದು ಈ ವಿಧೇಯಕವನ್ನು ತಂದಿದ್ದೇವೆ.

(ಈ ಹಂತದಲ್ಲಿ ಸದನದ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾ ಪಕ್ಷದ ಸದಸ್ಯರು 'ಬೇಕೇಬೇಕು ನ್ಯಾಯ ಬೇಕು', 'ಬೇಕೇಬೇಕು ನ್ಯಾಯ ಬೇಕು', "We want justice", "We want justice" ಎನ್ನುವ ಘೋಷಣೆಗಳನ್ನು ಕೂಗಿದರು.)

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2019ರ ಆದಿಚುಂಚನಗಿರಿ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು**

**ಖಂಡ 2**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2ನ್ನು ವಿಧೇಯಕಕ್ಕೆ ಸೇರಿಸಲಾಯಿತು)

"ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಖಂಡ 1 ಇತ್ಯಾದಿ**

**ಸಭಾಪತಿಯವರು:–** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

(ಈ ಹಂತದಲ್ಲಿ ಸದನದ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾ ಪಕ್ಷದ ಸದಸ್ಯರು 'ಬೇಕೇಬೇಕು ನ್ಯಾಯ ಬೇಕು', 'ಬೇಕೇಬೇಕು ನ್ಯಾಯ ಬೇಕು', "We want justice", "We want justice" ಎನ್ನುವ ಘೋಷಣೆಗಳನ್ನು ಕೂಗಿದರು.)

**ಪ್ರಸ್ತಾಪದ ಅಂಗೀಕಾರ**

**ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು):–** ಮಾನ್ಯ ಸಭಾಪತಿಯವರೇ, "ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ರ ಆದಿಚುಂಚನಗಿರಿ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:–** ಪ್ರಸ್ತಾವ ಏನೆಂದರೆ;

"ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2019ರ ಆದಿಚುಂಚನಗಿರಿ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

"ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಋ) ಆರ್.ವಿ. ವಿಶ್ವವಿದ್ಯಾಲಯ ವಿಧೇಯಕ, 2019**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಜಿ.ಟಿ.ದೇವೇಗೌಡ (ಉನ್ನತ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2019ರ ಆರ್.ವಿ. ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

**ಶ್ರೀ ಜಿ.ಟಿ.ದೇವೇಗೌಡ(ಉನ್ನತ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೇ, ಎಲ್ಲ ಶಿಕ್ಷಣ ಸಂಸ್ಥೆಗಳಿಗೆ ಗುಣಮಟ್ಟದ ತಾಂತ್ರಿಕ ಶಿಕ್ಷಣ ಸಿಗಬೇಕು ಎನ್ನುವ ಹಿನ್ನೆಲೆಯಲ್ಲಿ ಈ ವಿಧೇಯಕವನ್ನು ತಂದಿದ್ದೇವೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2019ರ ಆರ್.ವಿ. ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2 ರಿಂದ 62ರವರೆಗೆ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಖಂಡ 2 ರಿಂದ 62 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ರಿಂದ 62ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

(ಈ ಹಂತದಲ್ಲಿ ಸದನದ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾ ಪಕ್ಷದ ಸದಸ್ಯರು 'ಬೇಕೇಬೇಕು ನ್ಯಾಯ ಬೇಕು', 'ಬೇಕೇಬೇಕು ನ್ಯಾಯ ಬೇಕು', "We want justice", "We want justice" ಎನ್ನುವ ಘೋಷಣೆಗಳನ್ನು ಕೂಗಿದರು.)

" ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು

**ಖಂಡ 1 ಇತ್ಯಾದಿ**

ಸಭಾಪತಿಯವರು:- ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

(ಈ ಹಂತದಲ್ಲಿ ಸದನದ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾ ಪಕ್ಷದ ಸದಸ್ಯರು "We want justice", "We want justice" 'ಬೇಕೇಬೇಕು ನ್ಯಾಯ ಬೇಕು,' 'ಬೇಕೇಬೇಕು ನ್ಯಾಯ ಬೇಕು' ಎನ್ನುವ ಘೋಷಣೆಗಳನ್ನು ಕೂಗಿದರು.)

**ಶ್ರೀ ಜಿ.ಟಿ.ದೇವೇಗೌಡ (ಉನ್ನತ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ರ ಆರ್.ವಿ.ವಿಶ್ವವಿದ್ಯಾಲಯ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2019ರ ಆರ್.ವಿ. ವಿಶ್ವವಿದ್ಯಾಲಯ ವಿಧೇಯಕವನ್ನು ಅಂಗೀಕರಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

## ಎ) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2019

### ಪರ್ಯಾಲೋಚನಾ ಪ್ರಸ್ತಾವ

**ಡಾ:ಜಯಮಾಲ(ಸಭಾನಾಯಕರು)(ಮುಖ್ಯಮಂತ್ರಿಗಳ ಪರವಾಗಿ):–** ಮಾನ್ಯ ಸಭಾಪತಿಯವರೇ, 2019ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಡಾ:ಜಯಮಾಲ(ಸಭಾನಾಯಕರು)(ಮುಖ್ಯಮಂತ್ರಿಗಳ ಪರವಾಗಿ):–** ಮಾನ್ಯ ಸಭಾಪತಿಯವರೇ, ಶಿಕ್ಷಕರ ವರ್ಗಾವಣೆ ನಿಯಂತ್ರಣ ಕುರಿತು, ಶಿಕ್ಷಕರಿಗೆ ಅನುಕೂಲವಾಗಲು ಹಾಗೂ ಷರತ್ತುಗಳನ್ನು ಸಡಿಲಗೊಳಿಸುವುದಕ್ಕಾಗಿ 5 ವರ್ಷಗಳಿಗೆ ಇದ್ದ ವರ್ಗಾವಣೆ ನಿಯಮವನ್ನು 3 ವರ್ಷಕ್ಕೆ ಇಳಿಸುವಂಥದ್ದು ಈ ವಿಧೇಯಕದ ಉದ್ದೇಶವಾಗಿದೆ.

(ಈ ಹಂತದಲ್ಲಿ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾಪಕ್ಷದ ಸದಸ್ಯರು, “ಅನ್ಯಾಯ, ಅನ್ಯಾಯ” ಎಂದು ಘೋಷಣೆ ಕೂಗುತ್ತಿದ್ದರು)

(ಮುಂದು...)

(68) 14–02–2019 12.00 ಡಿಎಸ್–ಆರ್ಎನ್

ಡಾ:ಜಯಮಾಲ(ಮುಂದು)

ಒಬ್ಬ ಶಿಕ್ಷಕ ಅಥವಾ ಆ ಶಿಕ್ಷಕರ ಪತಿ ಅಥವಾ ಪತ್ನಿ (spouse) ಅಥವಾ ಮಕ್ಕಳು ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದಲ್ಲಿ ಮತ್ತು ಅದಕ್ಕೆ ವೈದ್ಯಕೀಯ ಚಿಕಿತ್ಸೆಯು ಎಲ್ಲಿಯೂ ದೊರೆಯದಿದ್ದಲ್ಲಿ ಮತ್ತು ಪತಿ ಮತ್ತು ಪತ್ನಿ ಪ್ರಕರಣಗಳ ಸಂದರ್ಭದಲ್ಲಿ, ಒಂದೇ ಸ್ಥಳದಲ್ಲಿ ಸ್ಥಳನಿಯುಕ್ತಿಗಾಗಿ ಕಡ್ಡಾಯ ವರ್ಗಾವಣೆಯಿಂದ ವಿನಾಯಿತಿಯನ್ನು ನೀಡಲು ಈ ವಿಧೇಯಕವನ್ನು ತರಲಾಗಿದೆ.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿಯಲ್ಲಿ ನಿರತರಾಗಿದ್ದ ವಿರೋಧ ಪಕ್ಷದ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

**ಸಭಾಪತಿಯವರು:-** ಧರಣಿಯಲ್ಲಿ ನಿರತರಾದವರು ಏನೇ ಘೋಷಣೆಗಳನ್ನು ಕೂಗಿದರೂ ಕೂಡ ಅದು ದಾಖಲೆಗೆ ಹೋಗಬಾರದು.

**ಶ್ರೀ ಪುಟ್ಟಣ್ಣ(ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ಇದೊಂದು ಗಂಭೀರವಾದಂತಹ ವಿಷಯ. ಮೂರು ವರ್ಷಗಳಿಂದ ವರ್ಗಾವಣೆ ಆಗಿಲ್ಲ. ಇದಕ್ಕೆ ಏನು ಮಾಡಬೇಕಾಗಿತ್ತೋ ಅದನ್ನು ಮಾಡಲಿಲ್ಲ, ಮಾಡಬಾರದ್ದನ್ನು ಮಾಡುವುದಕ್ಕೆ ಹೊರಟಿದ್ದಾರೆ. ಯಾರೂ ಕೂಡ ಅನ್ಯಥಾ ಭಾವಿಸಬಾರದು. ಮೂರು ವರ್ಷಗಳಿಂದ ವರ್ಗಾವಣೆ ಮಾಡುವುದು ಏಕೆ ನಿಂತಿದೆ ಎಂದರೆ, ಕಡ್ಡಾಯ ವರ್ಗಾವಣೆ ಎಂದು ತಂದರು, ಆ ಕಡ್ಡಾಯ ವರ್ಗಾವಣೆ ಯಾರಿಗೂ ಬೇಕಾಗಿರಲಿಲ್ಲ. ‘ಎ’ ಯಿಂದ ‘ಬಿ’ ವಲಯಕ್ಕೆ, ‘ಬಿ’ ಯಿಂದ ‘ಸಿ’ ವಲಯಕ್ಕೆ ಅಥವಾ ‘ಸಿ’ ಯಿಂದ ‘ಎ’ - ‘ಬಿ’ ವಲಯಕ್ಕೆ ವರ್ಗಾವಣೆ ಮಾಡುವುದರಲ್ಲಿ 5 ಪರ್ಸೆಂಟ್ ಎಂದು ಏನು ತಂದಿದ್ದಾರೆ, ಎಲ್ಲಾ ಕಡೆಯಲ್ಲೂ 15 ರಿಂದ 25 ಪರ್ಸೆಂಟ್ ಹುದ್ದೆಗಳು ಇವೆ. ಆದರೆ ಎಷ್ಟು ಪರ್ಸೆಂಟ್ ಕೋರಿಕೆಯ ವರ್ಗಾವಣೆ ಕೇಳುತ್ತಾರೆ, ಸರ್ಕಾರ ಎಷ್ಟು ಪರ್ಸೆಂಟ್ ವರ್ಗಾವಣೆ ಮಾಡುತ್ತದೆ ಅದಕ್ಕೆ ಎಷ್ಟು ಸಾಲುವುದಿಲ್ಲ ಅಷ್ಟನ್ನು ಮಾತ್ರ ಅತ್ಯಂತ ಹೆಚ್ಚಿನ ಅವಧಿಯನ್ನು ಪೂರೈಸಿರುವವರನ್ನು ಆಯಾಯ ವಲಯದಲ್ಲಿ ತೆಗೆದಿದ್ದರೆ ಸಾಕಾಗಿತ್ತು. ಆದರೆ 5 ಪರ್ಸೆಂಟ್ ಕಡ್ಡಾಯ ವರ್ಗಾವಣೆ, 5 ಪರ್ಸೆಂಟ್ ಕೋರಿಕೆಯ ವರ್ಗಾವಣೆ, ಇವೆಲ್ಲಾ ಮಾಡುವುದಕ್ಕೆ ಹೋಗಿ ಗೊಂದಲ ಮಾಡಿದರು. ಆದರೆ ಮತ್ತೆ ಈಗ ಕಡ್ಡಾಯ ವರ್ಗಾವಣೆ ಎನ್ನುವ ಭೂತವನ್ನು ಇಟ್ಟಿದ್ದಾರೆ. ಇದರಲ್ಲಿ ಮತ್ತೊಂದು ಎಡವಟ್ಟು ಎಂದರೆ, “ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ವಿದ್ಯಾರ್ಥಿ ಶಿಕ್ಷಕ ಅನುಪಾತದ ಆಧಾರದ ಮೇಲೆ ಮತ್ತು ಸಾರ್ವಜನಿಕ ಹಿತಾಸಕ್ತಿಯಲ್ಲಿ ತುಂಬುವ ಅಗತ್ಯವಿರುವ ಒಂದು ಸ್ಥಳವನ್ನು ಯಾವೊಬ್ಬ ಶಿಕ್ಷಕನೂ ಆಯ್ಕೆ ಮಾಡಿಕೊಳ್ಳದಿದ್ದಾಗ, ರಾಜ್ಯ ಸರ್ಕಾರವು, ಯಾವುದೇ ಇತರ ವಲಯದಲ್ಲಿ ಕನಿಷ್ಠ ಸೇವಾವಧಿಯನ್ನು ಪೂರೈಸಿರುವ ಯಾವೊಬ್ಬ ಶಿಕ್ಷಕನನ್ನು, ನಿಯಮಿಸಬಹುದಾದ ಅಂಥ ಇತರ ಷರತ್ತುಗಳಿಗೆ ಒಳಪಟ್ಟು ಅಂಥ ಸ್ಥಳಕ್ಕೆ ವರ್ಗಾಯಿಸಬಹುದು”

ಮಾನ್ಯ ಸಭಾಪತಿಯವರೇ, ಇದುವರೆವಿಗೂ ಯಾವುದೇ ಸರ್ಕಾರ ಇರಲಿ, ಕನಿಷ್ಠ 25,000 ದಿಂದ 30,000 ಶಿಕ್ಷಕರ ಹುದ್ದೆಗಳು ಸಾಮಾನ್ಯವಾಗಿ ಖಾಲಿ ಇದ್ದೇ ಇರುತ್ತವೆ. ಯಾವ ಸರ್ಕಾರ ಕೂಡ ಪೂರ್ತಿಯಾಗಿ ಶೇಕಡ ನೂರರಷ್ಟು ಹುದ್ದೆಗಳನ್ನು ತುಂಬುವುದಕ್ಕೆ ಸಾಧ್ಯವಾಗುವುದೇ ಇಲ್ಲ. ಏಕೆಂದರೆ, ಅಲ್ಲಲ್ಲೇ ನಿವೃತ್ತಿಯಾಗುವುದರಿಂದ ಹುದ್ದೆಗಳನ್ನು ತುಂಬುವುದಕ್ಕೆ ಅವಕಾಶ ಆಗುವುದಿಲ್ಲ. ಇದನ್ನು ಮಾಡುವುದರಿಂದ ವರ್ಗಾವಣೆಗೆ flood gate open ಮಾಡಿದಂತಾಗುತ್ತದೆ. ಅವರು ಇಷ್ಟ ಬಂದವರನ್ನು ಅವರಿಗೆ ಇಷ್ಟ ಬಂದ ಸ್ಥಳಕ್ಕೆ ವರ್ಗಾವಣೆ ಮಾಡಬಹುದು. ಇದೇನಾದರೂ ಜಾರಿಗೆ ಬಂದುಬಿಟ್ಟರೆ ಅದರಿಂದ ಹೇಳುವುದಕ್ಕಾಗದಿರುವಷ್ಟು ಭ್ರಷ್ಟಾಚಾರ ನಡೆಯುತ್ತದೆ. ಯಾವುದೇ ಒಂದು ಕ್ಷೇತ್ರದಲ್ಲಿ ಶೇಕಡ 25 ಅಥವಾ 35 ರಷ್ಟು ಹುದ್ದೆಗಳು ಇದ್ದರೆ ಮುಂದಿನ ದಿನಗಳಲ್ಲಿ ಶೇಕಡ 70-75 ರಷ್ಟು

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

ಹುದ್ದೆಗಳು ಖಾಲಿಯಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ಅಷ್ಟೇ ಅಲ್ಲದೆ ಯಾವ ಅಧಿಕಾರಿಗಳು ಕೂಡ ಅಲ್ಲಿ ಕುಳಿತು ಕೆಲಸ ಮಾಡುವುದಕ್ಕಾಗುವುದಿಲ್ಲ. ಯಾವ ಕಾರ್ಯದರ್ಶಿಯವರಾಗಲಿ, ಯಾವ ಶಾಸಕರಾಗಲಿ ಸರಿಯಾಗಿ ಕೆಲಸ ಮಾಡುವುದಕ್ಕಾಗುವುದಿಲ್ಲ. ಅಷ್ಟು ಒತ್ತಡ ಇದರ ಮೇಲೆ ಬರುತ್ತದೆ. ಆದ್ದರಿಂದ ಈ ಕಡ್ಡಾಯ ವರ್ಗಾವಣೆ ಎನ್ನುವಂಥದ್ದನ್ನು ದಯವಿಟ್ಟು ತೆಗೆಯಬೇಕು.

ಎರಡನೆಯದು, ಈಗೇನು ವಿಧೇಯಕವನ್ನು ತಂದಿದ್ದಾರೆ, ಅದರಲ್ಲಿರುವ ಈ ಅಂಶವನ್ನು ಕೈಬಿಟ್ಟು ಅದನ್ನು ಅನುಮೋದನೆ ಮಾಡಿ, ಇಲ್ಲದಿದ್ದರೆ ಇದು ಸರಿಯಾಗುವುದಿಲ್ಲ. ಏಕೆಂದರೆ ಇದು ಬಹಳ ಮಾರಕವಾಗಿರುವಂಥ ಅಂಶವಾಗಿದೆ. ಆದ್ದರಿಂದ ದಯವಿಟ್ಟು ಇದನ್ನು ಹೊರತುಪಡಿಸಿ ಅನುಮೋದನೆಯನ್ನು ಮಾಡಲಿ ಎಂದು ನಾನು ತಮ್ಮ ಮೂಲಕ ಸರ್ಕಾರಕ್ಕೆ ಮನವಿ ಮಾಡುತ್ತಿದ್ದೇನೆ. ಎಲ್ಲೆಲ್ಲಿ ಹಿಂದುಳಿದ ಪ್ರದೇಶಗಳಿವೆ, ಅಲ್ಲಿನ ಶಾಲೆಗಳಲ್ಲಿ ಶಿಕ್ಷಕರೇ ಇಲ್ಲದಿರುವಂತಹ ಪರಿಸ್ಥಿತಿಯಾಗುತ್ತದೆ. ದಯವಿಟ್ಟು ಇದಕ್ಕೆ ಅವಕಾಶ ಮಾಡಿಕೊಡಬಾರದು. ಯಾರಿಗೂ ಅನ್ಯಾಯವಾಗಬಾರದು, ಭ್ರಷ್ಟಾಚಾರವಾಗಬಾರದೆನ್ನುವ ಉದ್ದೇಶದಿಂದಲೇ ಕೌನ್ಸಿಲಿಂಗ್ ವ್ಯವಸ್ಥೆಯನ್ನು ತಂದಿರುವುದು. ಕೌನ್ಸಿಲಿಂಗ್ ಆದ ಮೇಲೆ ವರ್ಗಾವಣೆಯನ್ನು ಎಷ್ಟು ಪರ್ಸೆಂಟ್ ಮಾಡುತ್ತಾರೆ? 5 ಪರ್ಸೆಂಟ್, 10 ಪರ್ಸೆಂಟ್ ಅಥವಾ 20 ಪರ್ಸೆಂಟ್ ಮಾಡುತ್ತಾರೆಯೇ? ಅದಕ್ಕೆ ಮತ್ತೆ ಲಕ್ಷಾಂತರ ರೂಪಾಯಿಗಳನ್ನು ವಸೂಲಿ ಮಾಡುವಂತಹ ಗಿರಾಕಿಗಳು, ಏಜೆಂಟ್‌ಗಳು ಹುಟ್ಟಿಕೊಳ್ಳುತ್ತಾರೆ. ಯಾವುದೇ ಸರ್ಕಾರಗಳಿರಲಿ, ದಯವಿಟ್ಟು ಅದಕ್ಕೆ ಅವಕಾಶ ಆಗುವುದು ಬೇಡ. ಕಡ್ಡಾಯ ವರ್ಗಾವಣೆ ಎನ್ನುವುದನ್ನು ತೆಗೆಯಿರಿ. ಆ ವಿಚಾರದಲ್ಲಿ ಈಗ ನಾವೇನು ಹೇಳಿದ್ದೇವೆ, ಅದನ್ನು ತೆಗೆದು ಈ ಶಿಕ್ಷಕರ ವರ್ಗಾವಣೆ ನಿಯಂತ್ರಣ ವಿಧೇಯಕವನ್ನು ಅನುಮೋದನೆ ಮಾಡಬೇಕೆನ್ನುವುದು ನನ್ನ ಒತ್ತಾಯಪೂರ್ವಕ ವಿನಂತಿಯಾಗಿದೆ.

**ಶ್ರೀ ಶರಣಪ್ಪ ಮಟ್ಟೂರು(ಶಿಕ್ಷಕರ ಕ್ಷೇತ್ರ):–** ಮಾನ್ಯ ಸಭಾಪತಿಯವರೇ, ಈಗಾಗಲೇ ಮಾನ್ಯ ಪುಟ್ಟಣ್ಣನವರು ಹೇಳಿರುವುದಕ್ಕೆ ಪೂರಕವಾಗಿ ಹೇಳುವುದಾದರೆ, 5 ವರ್ಷ ಇರುವುದನ್ನು ಏನು 3 ವರ್ಷಕ್ಕೆ ಇಳಿಸಿದ್ದಾರೆ ಅದು ಸ್ವಾಗತಾರ್ಹ ಸಂಗತಿಯಾಗಿದೆ. ಆದರೆ “ಪದವಿ ಪೂರ್ವ ಶಿಕ್ಷಣ ಶಿಕ್ಷಕರ ವರ್ಗಾವಣೆಗೆ ಸಂಬಂಧಿಸಿದಂತೆ ನಗರಪಾಲಿಕೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಯನ್ನು ನಗರ ಪ್ರದೇಶದ ವ್ಯಾಪ್ತಿಯಲ್ಲಿ ಬರುವುದಿಲ್ಲ” ಎನ್ನುವುದನ್ನು ಈ ವಿಧೇಯಕದಲ್ಲಿ ತಂದಿದ್ದಾರೆ. ಆದ್ದರಿಂದ ಪದವಿಪೂರ್ವ ಶಿಕ್ಷಣ ಶಿಕ್ಷಕರ ವರ್ಗಾವಣೆಗೆ ಸಂಬಂಧಿಸಿದಂತೆ ಏನು ಬದಲಾವಣೆ ಮಾಡಿದ್ದಾರೆ, ಅದನ್ನೇ ಪ್ರೌಢಶಾಲಾ ಶಿಕ್ಷಕರ ವರ್ಗಾವಣೆಗೂ ಸಹ ಅನ್ವಯಿಸಬೇಕು. ಒಂದೇ ಕಾಯ್ದೆಯಲ್ಲಿ ಇಬ್ಬರಿಗೂ ವ್ಯತ್ಯಾಸವಿದೆ. There is a discrepancy with regard to this point. ದಯಮಾಡಿ ಇದರಲ್ಲಿ ಅದನ್ನು ತಿದ್ದಿಕೊಳ್ಳಬೇಕಾಗುತ್ತದೆ. ಈಗ 5 ವರ್ಷ ಇರುವುದನ್ನು 3 ವರ್ಷಕ್ಕೆ ತಂದಿದ್ದಾರೆ.

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

ಆದರೆ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಹತ್ತು ವರ್ಷದವರೆಗೆ ನೀವು ಅಲ್ಲೇ ಇರಬೇಕೆನ್ನುವ ಕಡ್ಡಾಯ ಆದೇಶವೇನಿದೆ, ಅದಕ್ಕೆ ಈ ವಿಧೇಯಕ ಅಡ್ಡ ಬರುತ್ತದೆ. ಎರಡನೆಯದು, ಪದವಿಪೂರ್ವ ಶಿಕ್ಷಣಕ್ಕೆ ಎ, ಬಿ, ಸಿ ಎಂದು ವಲಯಗಳನ್ನು ಮಾಡಿದ್ದಾರೆ. ಆದರೆ ಆ ವಲಯಗಳನ್ನು ವಿಂಗಡಿಸುವಾಗ ಪ್ರೌಢಶಾಲೆಯವರಿಗೆ ಒಂದು ರೀತಿ, ಪದವಿಪೂರ್ವ ಶಿಕ್ಷಣಕ್ಕೆ ಒಂದು ರೀತಿ ಏಕೆ ಮಾಡಿದ್ದಾರೆ? ಪದವಿಪೂರ್ವ ಶಿಕ್ಷಣದವರಿಗೆ ಮಾಡಿರುವುದು ಸರಿ ಇದೆ. ಪ್ರೌಢಶಾಲೆಯವರಿಗೂ ಕೂಡ ಅದೇ ರೀತಿಯ ಕಾಯ್ದೆಯನ್ನು ತರಬೇಕು. ಈ ಎರಡು ಅಂಶಗಳು ಬಹಳ ಪ್ರಮುಖವಾಗಿವೆ. ಈ ಎರಡು ತಿದ್ದುಪಡಿಗಳನ್ನು ಮಾಡುವುದಾದರೆ ಈ ವಿಧೇಯಕವನ್ನು ನಾವು ಸ್ವಾಗತಿಸುತ್ತೇವೆ.

**ಶ್ರೀ ಎಸ್.ಆರ್.ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ಈ ವಿಧೇಯಕದಲ್ಲಿ ತಂದಿರುವ ವರ್ಗಾವಣೆ ನಿಯಮಗಳಿಂದ ಖಂಡಿತವಾಗಿಯೂ flood gate open ಆದ ಹಾಗೆ ಆಗುತ್ತದೆ. ಇಲ್ಲಿಯವರೆಗೆ ಕರ್ನಾಟಕ ರಾಜ್ಯದಲ್ಲಿ ಶಾಂತಿ ಇತ್ತು. ಎಲ್ಲಾ ಶಾಸಕರು ಶಾಂತ ರೀತಿಯಲ್ಲಿದ್ದರು. ಈಗ ದಲ್ಲಾಳಿಗಳು ಹುಟ್ಟಿಕೊಳ್ಳುತ್ತಾರೆ. ಇಲ್ಲಿಯವರನ್ನು ತೆಗೆದು ಅಲ್ಲಿ ಹಾಕುವುದು, ಅಲ್ಲಿಯವರನ್ನು ತೆಗೆದು ಇಲ್ಲಿಗೆ ಹಾಕುವುದು, ಇದೇನು ಅಷ್ಟು ಸಮಂಜಸವಾಗಿಲ್ಲ. ಇದರಿಂದ ಒಳ್ಳೆಯದಾಗುವುದಕ್ಕಿಂತ ಕೆಟ್ಟದ್ದಾಗುವುದೇ ಜಾಸ್ತಿ. ಶಿಕ್ಷಣ ಸಚಿವರ ಕೊಠಡಿಯ ಮುಂದೆ ಮೂರು ಸಾವಿರ ಶಿಕ್ಷಕರ ಜಮಾವಣೆಯಾಗುತ್ತದೆ. ವರ್ಗಾವಣೆ ದಂಧೆ ನಡೆಸುವುದಕ್ಕೆ ಈ ವಿಧೇಯಕ ಅನುಕೂಲವಾಗುತ್ತದೆ. ಮಾನ್ಯ ಸಭಾನಾಯಕರೇ, ಈ ವಿಧೇಯಕದಿಂದ ಒಳ್ಳೆಯ ಪರಿಣಾಮಕ್ಕಿಂತ ದುಷ್ಪರಿಣಾಮವೇ ಹೆಚ್ಚು ಎಂಬ ಮಾತನ್ನು ಪುನರುಚ್ಚರಿಸುತ್ತಾ, ಮಾನ್ಯ ಪುಟ್ಟಣ್ಣರವರು ಹೇಳಿರುವ ಮಾತಿಗೆ ನಾನು ಸಹ ಧ್ವನಿಗೂಡಿಸುತ್ತೇನೆ.

**ಶ್ರೀ ಪುಟ್ಟಣ್ಣ:-** ಮಾನ್ಯ ಸಭಾಪತಿಯವರೇ, ಇದನ್ನು ಸೆಲೆಕ್ಟ್ ಕಮಿಟಿಗೆ ಹಾಕಿ, ನಾವು ಸರಿಪಡಿಸುತ್ತೇವೆ. ತಾವು ತಮ್ಮ ಪೀಠದಿಂದ ಸೆಲೆಕ್ಟ್ ಕಮಿಟಿಗೆ ಆದೇಶವನ್ನು ಮಾಡಿದರೆ, ನಾವು ಇದನ್ನು ಒಂದೇ ದಿನದಲ್ಲಿ ಮಾಡಿಕೊಡುತ್ತೇವೆ.

**ಶ್ರೀ ಯು.ಟಿ.ಖಾದರ್(ನಗರಾಭಿವೃದ್ಧಿ ಸಚಿವರು):-** ಮಾನ್ಯ ಸಭಾಪತಿಯವರೇ, ಮಾನ್ಯ ಹಿರಿಯ ಸದಸ್ಯರು ತಮ್ಮ ಅನಿಸಿಕೆಯನ್ನು ವ್ಯಕ್ತಪಡಿಸುವ ಮೂಲಕ ಉತ್ತಮ ಅಂಶವನ್ನು ಹೇಳಿದ್ದಾರೆ, ಇಲ್ಲ ಎಂದು ಹೇಳುವುದಕ್ಕೆ ಸಾಧ್ಯವಿಲ್ಲ. ಏಕೆಂದರೆ, ಇವತ್ತು ನಾವು ಬಹಳಷ್ಟು ಜನರನ್ನು ನೋಡುತ್ತಿದ್ದೇವೆ. ಪೋಲೀಸ್ ಇಲಾಖೆ, ಆರೋಗ್ಯ ಇಲಾಖೆ, ಈ ರೀತಿ ಬೇರೆ ಬೇರೆ ಇಲಾಖೆಗಳಿಗೆ ಹೋದಾಗ ನೌಕರರು ಒಂದು ಕಡೆ ಇದ್ದರೆ, ಅವರ ಮನೆಯವರು ಒಂದು ಕಡೆ ಇರುತ್ತಾರೆ. ಹೀಗಾಗಿ ವರ್ಗಾವಣೆಗೊಂಡ ಸ್ಥಳದಲ್ಲಿ ಆರು ತಿಂಗಳು ಕೆಲಸ ಮಾಡಿ ಮತ್ತೆ ವಾಪಸ್ ವರ್ಗಾವಣೆಯನ್ನು ತೆಗೆದುಕೊಳ್ಳುತ್ತಾರೆ. ಪೋಲೀಸ್ ಇಲಾಖೆಯಲ್ಲಿ ಬಹಳಷ್ಟು ಇನ್ಸ್‌ಪೆಕ್ಟರ್‌ಗಳಿದ್ದಾರೆ. ಇನ್ಸ್‌ಪೆಕ್ಟರ್ ಒಂದು ಕಡೆ ಕೆಲಸ

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಮಾಡುತ್ತಿದ್ದರೆ, ಅವರ ಮನೆಯವರು ಎಲ್ಲೋ ದೂರ ಇರುತ್ತಾರೆ. ಹೀಗಾಗಿ ವರ್ಗಾವಣೆಗೊಂಡ ಸ್ಥಳದಲ್ಲಿ ಒಂದೆರಡು ವರ್ಷ ಮಾತ್ರ ಇದ್ದು, ಮತ್ತೆ ವರ್ಗಾವಣೆ ತೆಗೆದುಕೊಂಡು ಹೋಗುತ್ತಾರೆ. ಆದ್ದರಿಂದ ಇಂತಹ ಪರಿಸ್ಥಿತಿಯಲ್ಲಿರುವವರಿಗೆ ವರ್ಗಾವಣೆಗೆ ಅವಕಾಶ ಕೊಡಬೇಕೆಂದು ನಾನು ಹೇಳುತ್ತಿದ್ದೇನೆ. ಇದರಲ್ಲಿ ಸಮಸ್ಯೆ ಇದೆ, ಇಲ್ಲ ಎಂದು ಹೇಳುವುದಿಲ್ಲ. ಆದರೆ ಸರ್ಕಾರ ಪ್ರಾಕ್ಟಿಕಲ್ ಆಗಿ ಯೋಚನೆ ಮಾಡಬೇಕಾಗುತ್ತದೆ.

**ಶ್ರೀ ಎಸ್.ಆರ್.ಪಾಟೀಲ್:–** ಮಾನ್ಯ ಸಭಾಪತಿಯವರೇ, intention of this legislation may be good. Legislation intention ಕೆಟ್ಟಿದೆ ಎಂದು ನಾನು ಹೇಳುವುದಿಲ್ಲ. ಆದರೆ ಇದರಿಂದ ಒಳ್ಳೆಯದಕ್ಕಿಂತ ಕೆಟ್ಟದ್ದೇ ಜಾಸ್ತಿಯಾಗುತ್ತದೆ. ಈಗ ಮಾನ್ಯ ಪುಟ್ಟಣ್ಣನವರು ಹೇಳಿದ ಹಾಗೆ ಸೆಲೆಕ್ಟ್ ಕಮಿಟಿಗೆ ರೆಫರ್ ಮಾಡಿ. ಆ ಕಮಿಟಿಗೆ ಕಾಲಮಿತಿಯನ್ನು ನಿಗದಿ ಮಾಡಿ. ಮುಂದಿನ ಅಧಿವೇಶನದಲ್ಲಿ ಈ ವಿಧೇಯಕಕ್ಕೆ ಅನುಮೋದನೆ ಮಾಡಿಕೊಡೋಣ.

**ಡಾ:ಜಯಮಾಲ:–** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರು ಹೇಳಿರುವುದನ್ನು ನಾವು ಒಪ್ಪಿಕೊಳ್ಳುತ್ತೇವೆ. ಇದನ್ನು ನಾವು ರೂಲ್ಸ್‌ನಲ್ಲಿ ತಿದ್ದುಪಡಿ ಮಾಡಬಹುದು. ಆದ್ದರಿಂದ ಈಗ ಅವರು ಈ ವಿಧೇಯಕವನ್ನು ಪಾಸ್ ಮಾಡಿಕೊಡಬೇಕು ಎಂದು ವಿನಂತಿಸುತ್ತೇನೆ.

(ಮುಂದು)

(69) 14.2.2019 12.10 ಬಿಕೆಪಿ(ಪಿಕೆ)ಆರ್‌ಎನ್

(ಸಭಾಪತಿಗಳ ಉಪಸ್ಥಿತಿ)

(ಗೊಂದಲ)

**ಡಾ:ಜಯಮಾಲ(ಸಭಾನಾಯಕರು):–** ಮಾನ್ಯ ಸಭಾಪತಿಯವರೇ, ಈಗ ಈ ವಿಧೇಯಕವನ್ನು ಪಾಸ್ ಮಾಡಿಕೊಡಲಿ. ರೂಲ್ಸ್ ಮಾಡುವಾಗ ಮಾನ್ಯ ಸದಸ್ಯರು ಸೂಚಿಸಿದಂತೆ ಮಾರ್ಪಾಡು ಮಾಡಿಕೊಳ್ಳುತ್ತೇವೆ. ದಯವಿಟ್ಟು ಈ ವಿಧೇಯಕವನ್ನು ಪಾಸ್ ಮಾಡಿಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

**ಶ್ರೀ ಕೆ.ಸಿ.ಕೊಂಡಯ್ಯ:–** ಮಾನ್ಯ ಸಭಾಪತಿಯವರೇ, ಮೇಲ್ಮನೆಯಲ್ಲಿ ಶಿಕ್ಷಕರ ಕ್ಷೇತ್ರಗಳಿಂದ ಮತ್ತು ಪದವೀಧರ ಕ್ಷೇತ್ರಗಳಿಂದ ಸುಮಾರು 14 ಜನ ಸದಸ್ಯರು ಆರಿಸಿ ಬಂದಿದ್ದಾರೆ. ಈ ವಿಧೇಯಕವನ್ನು ಅಂಗೀಕರಿಸಬೇಕಾದರೆ ಅವರ ಅಭಿಪ್ರಾಯಗಳನ್ನು ಗಣನೆಗೆ ತೆಗೆದುಕೊಳ್ಳಬೇಕಾಗುತ್ತದೆ. ಕೆಳಮನೆಯಲ್ಲಿ ಅಂಗೀಕಾರವಾಗಿದೆ, ಹಾಗಾಗಿ ಮೇಲ್ಮನೆಯಲ್ಲೂ

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

ಅಂಗೀಕಾರವಾಗಬೇಕು ಎನ್ನುವುದು ಸೂಕ್ತವಲ್ಲ. ಇದನ್ನು ಜಾಯಿಂಟ್ ಸೆಲೆಕ್ಟ್ ಕಮಿಟಿಗೆ ಹಾಕಿ, ಅಲ್ಲಿಂದ ಬರುವ ಅಭಿಪ್ರಾಯದ ಹಿನ್ನೆಲೆಯಲ್ಲಿ ಸರ್ಕಾರ ಮುಂದುವರೆಯಬಹುದಾಗಿದೆ.

(ಗೊಂದಲ)

**ಶ್ರೀ ಕೆ.ಟಿ.ಶ್ರೀಕಂಠೇಗೌಡ:-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶರಣಪ್ಪ ಮಟ್ಟೂರರವರು ಹೇಳಿದ ಹಾಗೆ ... (ಗೊಂದಲ) ಸಾರ್ವಜನಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ವಿಸ್ತರಿಸುವ ...

(ಗೊಂದಲ)

**ಶ್ರೀ ಎಸ್.ಆರ್.ಪಾಟೀಲ್:-** ಮಾನ್ಯ ಸಭಾಪತಿಯವರೇ, you have unfettered discretionary power. ಅದು arbitrary ಆಗಿ exercise ಆಗುವಂತಹ ಸಾಧ್ಯತೆ ಇದೆ. (ಗೊಂದಲ) ದಯವಿಟ್ಟು ಇದನ್ನು ಸೆಲೆಕ್ಟ್ ಕಮಿಟಿಗೆ ರೆಫರ್ ಮಾಡಿ. ಹೀಗೆ ಮಾಡುವುದರಿಂದ ಆಕಾಶ ಏನೂ ತಲೆಮೇಲೆ ಬೀಳುವುದಿಲ್ಲ.

(ಗೊಂದಲ)

**ಶ್ರೀ ಯು.ಟಿ.ಖಾದರ್(ನಗರಾಭಿವೃದ್ಧಿ ಸಚಿವರು):-** ಮಾನ್ಯ ಸಭಾಪತಿಯವರೇ, ವಿದ್ಯಾರ್ಥಿಗಳ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಈ ವಿಧೇಯಕವನ್ನು ತಂದಿದೆ. ಮಾನ್ಯ ಸದಸ್ಯರುಗಳು ಕೇವಲ ಶಿಕ್ಷಕರ ದೃಷ್ಟಿಯಿಂದ ಮಾತ್ರ ಮಾತನಾಡುತ್ತಿದ್ದಾರೆ. ವಿದ್ಯಾರ್ಥಿಗಳ ಹಿತದೃಷ್ಟಿಯನ್ನು ಸಹ ಗಮನದಲ್ಲಿಟ್ಟುಕೊಂಡು ಮಾತನಾಡಬೇಕು.

(ಗೊಂದಲ)

**ಶ್ರೀ ಎಸ್.ಆರ್.ಪಾಟೀಲ್:-** ಮಾನ್ಯ ಸಭಾಪತಿಯವರೇ, ವಿದ್ಯಾರ್ಥಿಗಳ ಹಿತಕ್ಕೂ ಶಿಕ್ಷಕರ ವರ್ಗಾವಣೆಗೂ ಏನೂ ಸಂಬಂಧ ಇಲ್ಲ. Hon'ble Minister has been misguided. ಮಾನ್ಯ ಸಭಾಪತಿಯವರೇ, ದಯವಿಟ್ಟು ಇದನ್ನು ಸೆಲೆಕ್ಟ್ ಕಮಿಟಿಗೆ ಹಾಕಿ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಸಭಾಪತಿಯವರು:–** ಸೆಲೆಕ್ಟ್ ಕಮಿಟಿಗೆ ಹಾಕಲು ಸರ್ಕಾರ ಒಪ್ಪುತ್ತದೆಯೇ?

**ಡಾ:ಜಯಮಾಲ(ಸಭಾನಾಯಕರು):–** ಇಲ್ಲ.

(ಗೊಂದಲ)

**ಶ್ರೀ ಪುಟ್ಟಣ್ಣ:–** ದಯವಿಟ್ಟು ಇದನ್ನು ಸೆಲೆಕ್ಟ್ ಕಮಿಟಿಗೆ ಹಾಕಿ.

(ಗೊಂದಲ)

**ಶ್ರೀ ಎಸ್.ಆರ್.ಪಾಟೀಲ್:–** ಮಾನ್ಯ ಸಭಾಪತಿಯವರೇ, ಇದನ್ನು ಸೆಲೆಕ್ಟ್ ಕಮಿಟಿಗೆ ಹಾಕಿದರೆ ಮುಂದೆ ಆಗುವಂತಹ ಅನಾಹುತವನ್ನು ತಪ್ಪಿಸಬಹುದು.

(ಗೊಂದಲ)

**ಸಭಾಪತಿಯವರು:–** ಸದನವನ್ನು 10 ನಿಮಿಷಗಳ ಕಾಲ ಮುಂದೂಡಲಾಗಿದೆ.

(70)14.02.2019/1.10/ಎಸ್‌ಕೆ–ಕೆಎಸ್

**(ಅಪರಾಹ್ನ 12 ಗಂಟೆ 14 ನಿಮಿಷಕ್ಕೆ ಮುಂದೂಡಲ್ಪಟ್ಟ ಸದನವು ಪುನಃ ಅಪರಾಹ್ನ 1 ಗಂಟೆ 10 ನಿಮಿಷಕ್ಕೆ ಸಮಾವೇಶಗೊಂಡಿತು)**

**(ಮಾನ್ಯ ಸಭಾಪತಿಯವರು ಪೀಠವನ್ನು ಅಲಂಕರಿಸಿದರು)**

(ಸದನ ಪ್ರಾರಂಭವಾಗುತ್ತಿದ್ದಂತೆ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ, ಭಾರತೀಯ ಜನತಾ ಪಕ್ಷದ ಮಾನ್ಯ ಸದಸ್ಯರುಗಳು ಸದನದ ಬಾವಿಗೆ ಬಂದು ಧರಣಿಯಲ್ಲಿ ನಿರತರಾದರು)

**ಸಭಾಪತಿಯವರು:–** ಮಾನ್ಯ ಸಚಿವರೇ, ಮಾತನಾಡಿ.

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”

**ಡಾ||ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರು ಅನೇಕ ಸಲಹೆಗಳನ್ನು ನೀಡಿದರು. ನಾನು ನಿಯಮದಲ್ಲಿರುವ ಒಂದು ಸಣ್ಣ ಪ್ಯಾರಾವನ್ನು ಓದುವುದಕ್ಕೆ ಇಷ್ಟಪಡುತ್ತೇನೆ. 'ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಸಾರ್ವಜನಿಕ ಹಿತಾಸಕ್ತಿಯಲ್ಲಿ ತುಂಬುವ ಆಗತ್ಯವಿರುವ ಒಂದು ಸ್ಥಳವನ್ನು ಯಾವೊಬ್ಬ ಶಿಕ್ಷಕನೂ ಆಯ್ಕೆ ಮಾಡಿಕೊಳ್ಳದಿದ್ದಾಗ ಯಾವುದೇ ಇತರ ವಲಯದಲ್ಲಿ ಕನಿಷ್ಠ ಸೇವಾವಧಿಯನ್ನು ಪೂರೈಸಿರುವ ಶಿಕ್ಷಕನನ್ನು ವಗಾಯಿಸಬಹುದಾದ ಷರತ್ತುಗಳನ್ನು ನಿಯಮಗಳ ಮೂಲಕ ನಿಯಮಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವನ್ನು ನೀಡುತ್ತದೆ'. ಹೀಗಾಗಿ ಇದು ಅಧಿಕಾರವನ್ನು ನೀಡುವಂತಹ ವಿಧೇಯಕವಾಗಿದೆ. ಮಾನ್ಯ ಸದಸ್ಯರ ಭಾವನೆಗಳನ್ನು ನಾನು ಅರ್ಥ ಮಾಡಿಕೊಂಡಿದ್ದೇನೆ. ಈ provision ದುರುಪಯೋಗ ಆಗದಿರುವತೆ ಅಲ್ಲಿನ discretionary power ಗಳನ್ನು ಹೊರತುಪಡಿಸಿ, ಷರತ್ತುಗಳನ್ನು ನಿಯಮದಲ್ಲಿ ಅಳವಡಿಸಿಕೊಂಡು, ಈ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಹೊರಗೆ ಇರುವಂತಹವರಿಗೆ ವರ್ಗಾವಣೆ apply ಆಗದಿರುವ ಹಾಗೆ ಇದನ್ನು ನಾವು ನೋಡಿಕೊಳ್ಳುತ್ತೇವೆ. ಅಂತಹ power ಗಳನ್ನು withdraw ಮಾಡುತ್ತೇವೆ ಮತ್ತು ನಿಯಮದಲ್ಲಿ ಅಳವಡಿಸಿಕೊಳ್ಳುತ್ತೇವೆ. ಈಗ ಈ ವಿಧೇಯಕವನ್ನು ತಾವು ಅಂಗೀಕರಿಸಬೇಕೆಂದು ತಮ್ಮ ಮೂಲಕ ಕೇಳಿಕೊಳ್ಳುತ್ತೇನೆ.

**(ಈ ಹಂತದಲ್ಲಿ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ, ಭಾರತೀಯ ಜನತಾ ಪಕ್ಷದ ಮಾನ್ಯ ಸದಸ್ಯರುಗಳು 'ವರ್ಗಾವಣೆಯಲ್ಲಿ ಮಧ್ಯವರ್ತಿಗಳನ್ನು ಹುಟ್ಟು ಹಾಕುತ್ತಿರುವ ಸರ್ಕಾರದ ವಿರುದ್ಧ ಧಿಕ್ಕಾರ' ಎಂದು ಘೋಷಣೆಯನ್ನು ಕೂಗುತ್ತಿದ್ದರು)**

**ಶ್ರೀ ಪುಟ್ಟಣ್ಣ(ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ಈ ವಿಧೇಯಕವನ್ನು ನಾನು ಒಪ್ಪಿಕೊಳ್ಳುತ್ತೇನೆ. ನಿಯಮಾವಳಿಗಳನ್ನು ಅಳವಡಿಸಿಕೊಳ್ಳುತ್ತೇವೆಂದು ಹೇಳುತ್ತಾರೆ. ಅದು ಸರಿಯಲ್ಲ. ಇದನ್ನು ಕೈ ಬಿಡುತ್ತೇವೆಂದು ಹೇಳಲಿ. ಏಕೆಂದರೆ, Act is Supreme. ದಯವಿಟ್ಟು, ಕಾಯಿದೆಯ ಮೇಲೆ ಇದನ್ನು ಕೈಬಿಟ್ಟು, ಒಂದನ್ನೇ approval ಮಾಡಿಕೊಳ್ಳಲಿ. ನಮ್ಮದೇನೂ objection ಇಲ್ಲ. ಎರಡನೆಯದು, ಕಡ್ಡಾಯ ಎನ್ನುವಂಥದ್ದೇನಿದೆ, 'ಎ' ವಲಯದಿಂದ 'ಸಿ' ವಲಯಕ್ಕೆ, 'ಸಿ' ವಲಯದಿಂದ 'ಬಿ' ವಲಯಕ್ಕೆ ಹಾಗೂ 'ಬಿ' ವಲಯದಿಂದ 'ಎ' ವಲಯಕ್ಕೆ ಕಡ್ಡಾಯ ವರ್ಗಾವಣೆ ಎನ್ನುವುದು ಇದೆ. ದಯವಿಟ್ಟು, ಕಡ್ಡಾಯ ಎನ್ನುವಂಥದ್ದನ್ನು ಸಹ ಕೈಬಿಟ್ಟು, ಈ ಕಾಯಿದೆಯನ್ನು approve ಮಾಡಿಕೊಳ್ಳಲಿ. ಇದಕ್ಕೆ ನಮ್ಮ ಬೆಂಬಲವಿದೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2018ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

"ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು.**

**ಖಂಡ 2 ರಿಂದ 4 ರವರೆಗೆ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಖಂಡ 2 ರಿಂದ 4ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಖಂಡ 2 ರಿಂದ 4ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)**

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಶ್ರೀ ಪುಟ್ಟಣ್ಣ(ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ಮಕ್ಕಳ ದೃಷ್ಟಿಯಿಂದ ಹಾಗೂ ಶಿಕ್ಷಕರ ದೃಷ್ಟಿಯಿಂದ ದಯವಿಟ್ಟು, ಇದನ್ನು ಕೈಬಿಡುತ್ತೇವೆಂದು ಹೇಳಿದ್ದಾರೆ. ಇದನ್ನು ಒಪ್ಪಿಕೊಳ್ಳುತ್ತೇನೆ. ಕಡ್ಡಾಯ ವರ್ಗಾವಣೆ ಎನ್ನುವಂಥದ್ದೇನಿದೆ, ದಯವಿಟ್ಟು ಅದನ್ನು ಕೈಬಿಡಬೇಕೆಂದು ನಾವು ಕೇಳುತ್ತಿದ್ದೇವೆ. ಇದಕ್ಕೆ ತಾವು ನಮ್ಮನ್ನು ಬೆಂಬಲಿಸಬೇಕೆಂದು ಕೇಳುತ್ತಿದ್ದೇವೆ.

**ಪ್ರಸ್ತಾವದ ಅಂಗೀಕಾರ**

**ಡಾ||ಜಯಮಾಲ (ಸಭಾನಾಯಕರು) (ಮುಖ್ಯಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಯವರೇ, ಕರ್ನಾಟಕ ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2018ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

" ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**ಸಭಾಪತಿಯವರುಃ–** ಪ್ರಸ್ತಾವ ಏನೆಂದರೆ;

"ಕರ್ನಾಟಕ ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2018ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

## 4. ಪ್ರಕಟಣೆ

**ಸಭಾಪತಿಯವರು:–** ಮಾನ್ಯ ಸಭಾಧ್ಯಕ್ಷರಿಂದ ಈ ಮುಂದಿನ ಸಂದೇಶ ಬಂದಿರುತ್ತದೆ. ಕರ್ನಾಟಕ ವಿಧಾನಸಭೆಯು ಕಾರ್ಯ ವಿಧಾನ ಮತ್ತು ನಡವಳಿಕೆಯ ನಿಯಮ 104ರ ಮೇರೆಗೆ ವಿಧಾನ ಸಭೆಯು ದಿನಾಂಕ:14.02.2019ರಂದು ಈ ಕೆಳಕಂಡ ವಿಧೇಯಕಗಳನ್ನು ಅಂಗೀಕರಿಸಿತೆರುವು ಹಾಗೂ ಸದರಿ ವಿಧೇಯಕಕ್ಕೆ ವಿಧಾನ ಪರಿಷತ್ತಿನ ಸಹಮತಿಯನ್ನು ನೀಡಬೇಕೆಂದು ಕೋರಿರುತ್ತಾರೆ.

1. ಕರ್ನಾಟಕ ಧನವಿನಿಯೋಗ ವಿಧೇಯಕ, 2019
2. ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2019

## 5. ಸಭಾಪತಿಯವರ ಅನುಮತಿ ಮೇರೆಗೆ ಪ್ರಸ್ತಾಪಿಸಲ್ಪಟ್ಟ ವಿಷಯಗಳಿಗೆ ಸಂಬಂಧಿಸಿದಂತೆ ಸಚಿವರ ಹೇಳಿಕೆಗಳು

ಅ) ರಾಜ್ಯದಲ್ಲಿ ಸರ್ವ ಶಿಕ್ಷಣ ಅಭಿಯಾನ ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ವೇತನ ಪಾವತಿಸದಿರುವ ಬಗ್ಗೆ.

~~~~~~

**ಡಾ||ಜಯಮಾಲ(ಸಭಾನಾಯಕರು) (ಮುಖ್ಯಮಂತ್ರಿಗಳ ಪರವಾಗಿ):–** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಶರಣಪ್ಪ ಮಟ್ಟೂರ ಅವರು ದಿನಾಂಕ: 13.02.2019 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದಂತಹ ವಿಷಯಕ್ಕೆ ಸದನದಲ್ಲಿ ಉತ್ತರವನ್ನು ಮಂಡಿಸುತ್ತಿದ್ದೇನೆ.

(ಪ್ರತಿಯನ್ನು ಲಗತ್ತಿಸಲಾಗಿದೆ)

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"
~~~~~~

**ಆ) ಹುಬ್ಬಳ್ಳಿ-ಧಾರವಾಡ ಶಹರ ಮತ್ತು ಗ್ರಾಮಾಂತರ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಡಿಸೆಂಬರ್ ಹಾಗೂ ಜನವರಿ ತಿಂಗಳ ವೇತನ ಬಿಡುಗಡೆ ಕುರಿತು.**

~~~~~

**ಡಾ||ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಎಸ್.ವ್ಹಿ.ಸಂಕನೂರ ಅವರು ದಿನಾಂಕ: 13.02.2019 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದಂತಹ ಸೂಚನೆಗೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

(ಪ್ರತಿಯನ್ನು ಲಗತ್ತಿಸಲಾಗಿದೆ)

**6. <u>ಸಭಾಪತಿಯವರ ತೀರ್ಪು</u>**

**ಸಭಾಪತಿಯವರು:- ದಿನಾಂಕ: 11ನೇ ಫೆಬ್ರವರಿ, 2019ರಂದು ಮಾನ್ಯ ಸದಸ್ಯರಾದ ಶ್ರೀ ಐವನ್ ಡಿ'ಸೋಜ ಹಾಗೂ ಇತರರುಗಳು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಾವಳಿಗಳ ನಿಯಮ 342ರ ಅಡಿಯಲ್ಲಿ ನೀಡಿರುವ ಸೂಚನೆಯ ಸಂಬಂಧದಲ್ಲಿ ಸದನದಲ್ಲಿ ನಡೆದ ಸುದೀರ್ಘ ಚರ್ಚೆಯ ಹಿನ್ನೆಲೆಯಲ್ಲಿ ನಾನು ತೀರ್ಪನ್ನು ಕಾಯ್ದಿರಿಸಿದ್ದು, ಇಂದು ಸದರಿ ಸೂಚನೆಯ ಸಂಬಂಧದಲ್ಲಿ ತೀರ್ಪನ್ನು ಪ್ರಕಟಿಸುತ್ತಿದ್ದೇನೆ.**

ಮಾನ್ಯ ಸದಸ್ಯರುಗಳು ನೀಡಿರುವ ಸೂಚನೆಯಲ್ಲಿನ ಅಂಶಗಳನ್ನು ಪರಿಶೀಲಿಸಲಾಗಿ, ದಿನಾಂಕ:11.02.2019ರಂದು ರಾಜ್ಯದ ದಿನಪತ್ರಿಕೆಗಳಲ್ಲಿ ಪ್ರಕಟಗೊಂಡಿರುವ ವಿಷಯವು ಶಾಸಕರ ಘನತೆ ಗೌರವಗಳಿಗೆ ಧಕ್ಕೆ ತರುವುದಲ್ಲದೆ, ವಿಧಾನ ಮಂಡಲದ ಗೌರವಕ್ಕೂ ಚ್ಯುತಿ ಉಂಟಾಗಿದ್ದು ಈ ಸದನದ ಹಕ್ಕುಚ್ಯುತಿಯಾಗಿರುತ್ತದೆ ಎಂದು ಪ್ರಸ್ತಾಪಿಸಲಾಗಿರುತ್ತದೆ.

ಕೌಲ್ ಅಂಡ್ ಶಕ್ದರ್‌ರವರ 7ನೇ ಅವತರಣಿಕೆಯ ಪುಟ ಸಂಖ್ಯೆ:326ರಲ್ಲಿ;

**Complaints against Members or Officer of the Other House**

**Neither House of Parliament can claim or exercise any authority over a member of the other House. Consequently, neither House can take upon itself to punish any breach of privilege or contempt offered to it by a member or officer of the other House. ಅಂದರೆ ಪ್ರತಿಯೊಂದು ಸದನವು ಅದರ ವ್ಯವಹರಣೆಗೆ ಸಂಬಂಧಿಸಿದಂತೆ ಅವುಗಳೇ ಸರ್ವೋಚ್ಚವಾದುದು ಎಂಬುದಾಗಿರುತ್ತದೆ.**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"
~~~~~

ಆದರೆ ಪತ್ರಿಕೆಗಳಲ್ಲಿ ಪ್ರಕಟವಾಗಿರುವ ವಿಷಯವು ವಿಧಾನಸಭೆಯ ಸದಸ್ಯರಿಗೆ ಸಂಬಂಧಿಸಿದ್ದಾಗಿದ್ದು, ಈ ಸದನಕ್ಕೆ ಸಂಬಂಧಿಸಿದ ವಿಷಯವಾಗಿರುವುದಿಲ್ಲವಾದ ಕಾರಣ ಈ ಸದನದ ಹಕ್ಕುಚ್ಯುತಿ ಪ್ರಶ್ನೆಯೇ ಉದ್ಭವಿಸುವುದಿಲ್ಲ.

ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಯವರ ಅಭಿಪ್ರಾಯಗಳು ಮತ್ತು ತೀರ್ಪುಗಳು 1956–1975 ಹೊತ್ತಿಗೆಯ ಪುಟ ಸಂಖ್ಯೆ: 11ರಲ್ಲಿ *“It is wrong and it is not fair that any Member of this House should refer to names of individuals who are not present in the House and who have no opportunity, therefore, of either explaining the facts to the House or replying to the charge made,”* ಎಂದು ತೀರ್ಪನ್ನು ನೀಡಲಾಗಿರುತ್ತದೆ. 1990–1994 ಮತ್ತು 1995–1999ರ ಅಂದಿನ ಮಾನ್ಯ ಸಭಾಪತಿಯವರು ಕೆಳಮನೆಯ ಸದಸ್ಯರುಗಳ ಬಗ್ಗೆ ಮೇಲ್ಮನೆಯಲ್ಲಿ ಮಾತನಾಡಬಾರದೆಂದು ಹಾಗೂ ಸದನದ ಸದಸ್ಯರಲ್ಲದವರ ಹೆಸರುಗಳನ್ನು ಪ್ರಸ್ತಾಪಿಸಬಾರದೆಂದು ತೀರ್ಪನ್ನು ನೀಡಲಾಗಿರುತ್ತದೆ.

ಅಲ್ಲದೆ, ಸುಭಾಶ್ ಸಿ.ಕಶ್ಯಪ್ ರವರ ಪಾರ್ಲಿಮೆಂಟರಿ ಪ್ರೋಸಿಜರ್ ಪುಸ್ತಕದ ಪುಟ ಸಂಖ್ಯೆ:313ರಲ್ಲಿ ಈ ಮುಂದಿನಂತೆ ಉಲ್ಲೇಖಿಸಲಾಗಿದೆ.

> *‘Press reports cannot be accepted as authoritative for purpose of Motions. Motion based on a press report which is later contradicted by Minister/Government, is not admissible. Whenever a member in his notice of Motion, refers to a matter which is based on information contained in a newspaper or other document, he must furnish along with his notice a copy of the relevant paper or document. Failure to do so renders notice inadmissible.’*

ಪ್ರಸ್ತುತ, ಮಾನ್ಯ ಸದಸ್ಯರಾದ ಶ್ರೀ ಐವನ್ ಡಿ’ಸೋಜಾರವರು ಹಾಗೂ ಇತರ ಸದಸ್ಯರುಗಳು ನೀಡಿರುವ ಸೂಚನೆಯಲ್ಲಿ ವಿಧಾನಸಭೆಯ ಮಾನ್ಯ ಸಭಾಧ್ಯಕ್ಷರು, ವಿಧಾನಸಭೆಯ ವಿರೋಧ ಪಕ್ಷದ ನಾಯಕರಾದ ಶ್ರೀ ಬಿ.ಎಸ್.ಯಡಿಯೂರಪ್ಪ, ಗುರುಮಿಠಕಲ್ ಶಾಸಕ ಕಂದಕೂರು ನಾಗನಗೌಡರ ಮಗ ಶ್ರೀ ಶರಣಗೌಡ ಹಾಗೂ ಈ ಸದನದ ಸದಸ್ಯರುಗಳಲ್ಲದ ಇತರರುಗಳ ಹೆಸರುಗಳನ್ನು ಪ್ರಸ್ತಾಪಿಸಲಾಗಿರುತ್ತದೆ.

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

*Making allegations against persons who are not present in the House to defend themselves is not permissible.*

*Members should not refer to names or designation of individuals who are not present in the House and cannot reply to charges made against them and notices which are merely based on Press reports may not be admitted,* ಎಂಬ ಅಂಶಗಳ ಆಧಾರದ ಮೇಲೆ ಮಾನ್ಯ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಹಾಗೂ ಇತರರುಗಳು ನೀಡಿರುವ ಸೂಚನೆಯನ್ನು ಚರ್ಚೆಗೆ ತೆಗೆದುಕೊಳ್ಳುವುದು ಸೂಕ್ತವಲ್ಲವೆಂದು ತೀರ್ಮಾನಕ್ಕೆ ಬರಲಾಗಿರುತ್ತದೆ.

(ಮುಂದು...)

**(71)14.02.2019 1.20 ಟಿಸಿಹೆಚ್-ಜಿಆರ್**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು):-** ನಾವು ಅದನ್ನೇ ಹೇಳಿದ್ದು, ಆಡಳಿತ ಪಕ್ಷದವರೆಲ್ಲಾ ಸೇರಿಕೊಂಡು ಆರೋಪ-ಪ್ರತ್ಯಾರೋಪ ಮಾಡಿಕೊಂಡು ಅವೊತ್ತು ಸದನದ ಬಾವಿಗೆ ಇಳಿದಿದ್ದರಲ್ಲವೆ?

**(ಗೊಂದಲ)**

**ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೆ ...

**ಶ್ರೀ ಐವನ್ ಡಿ'ಸೋಜಾ (ನಾಮ ನಿರ್ದೇಶಿತರು):-** ಮಾನ್ಯ ಸಭಾಪತಿಯವರೆ, ಈಗ ವಿರೋಧ ಪಕ್ಷದವರು ಸದನದ ಬಾವಿಯಲ್ಲಿ ಧರಣಿಯಲ್ಲಿದ್ದಾರೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಆಡುವಂತಹ ಮಾತಿಗೆ ಇನ್ನಾದರೂ ಬುದ್ಧಿ ಬರುತ್ತದೆ ಎನ್ನುವಂತಹ ಆಸೆ ಅವರಿಗೆ ಇದೆ. ಸಮಾಜ ಕಲ್ಯಾಣ ಸಚಿವರ ಭ್ರಷ್ಟಾಚಾರದ ಬಗ್ಗೆ ಏನಾಯಿತು?

**(ಗೊಂದಲ)**

**ಸಭಾಪತಿಯವರು:-** ಈಗ 2019-2020ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು

## 7. ವಿತ್ತೀಯ ಕಾರ್ಯಕಲಾಪಗಳು

**2019-2020ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ**

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, he is a member of the Lower House. He is not a member of the Upper House. ಅವರ ಹೆಸರನ್ನು ಇಲ್ಲೇಕೆ ಪ್ರಸ್ತಾಪ ಮಾಡುತ್ತಿದ್ದಾರೆ?

**ಶ್ರೀ ಎನ್.ರವಿಕುಮಾರ್ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಅವರಿಗೆಲ್ಲಾ ನಾಚಿಕೆ ಆಗಬೇಕು.

**(ಗೊಂದಲ)**

**ಸಭಾಪತಿಯವರು:-** ಮಾನ್ಯ ಐವನ್ ಡಿ'ಸೋಜಾರವರೆ, ತಾವು ದಯವಿಟ್ಟು ಕುಳಿತುಕೊಳ್ಳಿ. ಆಡಳಿತ ಪಕ್ಷದವರೆಲ್ಲರೂ ಕುಳಿತುಕೊಳ್ಳಿ.

**ಡಾ||ಜಯಮಾಲ (ಸಭಾ ನಾಯಕರು):-** ಮಾನ್ಯ ಸಭಾಪತಿಯವರೆ, ...

**(ಗೊಂದಲ)**

**ಸಭಾಪತಿಯವರು:-** ಸದನದಲ್ಲಿ ಮಾನ್ಯ ಸದಸ್ಯರುಗಳು ನನ್ನ ಅನುಮತಿ ಪಡೆಯದೇ ಮಾತನಾಡಿದರೆ ಅದ್ಯಾವುದೂ ರೆಕಾರ್ಡ್‌ಗೆ ಹೋಗುವುದು ಬೇಡ.

**(ಈ ಹಂತದಲ್ಲಿ ಮಾನ್ಯ ಸಭಾಪತಿಯವರು ಯಾವುದೇ ನಡವಳಿಕೆಗಳನ್ನು ದಾಖಲಿಸದಿರಲು ಸೂಚಿಸಿದರು)**

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಸಭಾಪತಿಯವರು:-** ಮಾನ್ಯ ಸದಸ್ಯರೆ, 2019-2020ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಚರ್ಚೆ ಮಾಡುವುದು ಬೇಡವೇ?

**(ಗೊಂದಲ)**

**ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ಇವತ್ತಿನ ದಿವಸ ನಮ್ಮ ರಾಜ್ಯದ ಮುಖ್ಯಮಂತ್ರಿಗಳಾದ ಶ್ರೀ ಹೆಚ್.ಡಿ.ಕುಮಾರಸ್ವಾಮಿಯವರು ಮಂಡಿಸಿರುವಂತಹ ಆಯವ್ಯಯವನ್ನು ಸ್ವಾಗತ ಮಾಡುತ್ತಾ, ಇಡೀ ಭಾರತದಲ್ಲಿಯೇ ಅತ್ಯುತ್ತಮವಾದಂತಹ ಆಯವ್ಯಯವನ್ನು ಈ ರಾಜ್ಯಕ್ಕೆ ಕೊಟ್ಟಿದ್ದಾರೆ. ನಮ್ಮ ರಾಷ್ಟ್ರವು ರೈತರಿಂದ ಕೂಡಿದೆ. ಮಾನ್ಯ ಮುಖ್ಯಮಂತ್ರಿಗಳು ನಮ್ಮ ರಾಜ್ಯದ ರೈತರಿಗಾಗಿ ಅತ್ಯುತ್ತಮವಾದ ಕಾರ್ಯಕ್ರಮಗಳನ್ನು ನೀಡಿದ್ದಾರೆ. ಮೊದಲನೆಯದಾಗಿ, ಅವರು ಈ ರಾಜ್ಯದ ರೈತರ ಸಾಲವನ್ನು ಮನ್ನಾ ಮಾಡಲು ಘೋಷಣೆ ಮಾಡಿದ್ದಾರೆ.

**ಡಾ॥ ಜಯಮಾಲ (ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ಸಮ್ಮಿಶ್ರ ಸರ್ಕಾರ ಇದ್ದಾಗ ಇತಿಹಾಸದಲ್ಲೇ ರಾಜ್ಯಕ್ಕೆ ಇಷ್ಟೊಂದು ಒಳ್ಳೆಯ ಆಯವ್ಯಯವನ್ನು ಕೊಟ್ಟಿರುವಾಗ, ವಿರೋಧಪಕ್ಷದಲ್ಲಿರುವ ಎಲ್ಲಾ ಮಾನ್ಯ ಸದಸ್ಯರುಗಳು ಇದರ ಬಗ್ಗೆ ಚರ್ಚೆ ಮಾಡಬೇಕು. ಅದು ಬಿಟ್ಟು ಅವರು ಸದನದ ಬಾವಿಗೆ ಬಂದು ಧರಣಿ ಮಾಡುತ್ತಿದ್ದಾರೆ. ದಯವಿಟ್ಟು ತಾವು ಅವರಿಗೆ ಈ ಆಯವ್ಯಯದ ಮೇಲೆ ಚರ್ಚೆ ಮಾಡಬೇಕೆಂದು ಹೇಳಿ. ಇವತ್ತಿನ ದಿವಸ ಇಡೀ ರಾಜ್ಯದ ಜನತೆ ನಮ್ಮನ್ನು ನೋಡುತ್ತಿದ್ದಾರೆ. ಇಷ್ಟು ಒಳ್ಳೆಯ ಆಯವ್ಯಯವನ್ನು ಮಂಡಿಸಿದ್ದಾರೆ. ಇದರ ಬಗ್ಗೆ ಚರ್ಚೆ ಆಗಲಿ.

**ಶ್ರೀ ಹೆಚ್.ಎಂ.ರೇವಣ್ಣ:-** ಮಾನ್ಯ ಸಭಾಪತಿಯವರೆ, ಸಮ್ಮಿಶ್ರ ಸರ್ಕಾರ ಇರುವಂತಹ ಸಮಯದಲ್ಲೂ ಈ ರಾಜ್ಯದ ಅಭಿವೃದ್ಧಿಗೋಸ್ಕರ ಹಿಂದಿನ ಸರ್ಕಾರದ ಮುಖ್ಯಮಂತ್ರಿಗಳಾಗಿದ್ದ ಸನ್ಮಾನ್ಯ ಸಿದ್ದರಾಮಯ್ಯನವರು ಕೊಟ್ಟಂತಹ ಕಾರ್ಯಕ್ರಮಗಳನ್ನು ಕೂಡ ಮುಂದುವರೆಸಿಕೊಂಡು ಇಡೀ ಭಾರತದ ಆರ್ಥಿಕ ವ್ಯವಸ್ಥೆಯಲ್ಲಿ ಸಮ್ಮಿಶ್ರ ಸರ್ಕಾರವು ಮೊದಲನೇ ಸ್ಥಾನದಲ್ಲಿದೆ ಎಂದು ಹೇಳುವುದಕ್ಕೆ ನನಗೆ ಬಹಳ ಸಂತೋಷವಾಗುತ್ತದೆ.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಎಸ್.ಆರ್.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–** ಮಾನ್ಯ ಸಭಾಪತಿಯವರೆ, the House is not in order. How are you allowing the discussion on the Budget?

**ಶ್ರೀ ಹೆಚ್.ಎಂ.ರೇವಣ್ಣ:–** ಮಾನ್ಯ ಸಭಾಪತಿಯವರೆ, ಹಲವು ಕ್ಷೇತ್ರಗಳಲ್ಲಿ ಕರ್ನಾಟಕ ಸರ್ಕಾರ ಮೊದಲ ಸ್ಥಾನದಲ್ಲಿದೆ.

**(ಗೊಂದಲ)**

**ಶ್ರೀ ಎಸ್.ಆರ್.ಪಾಟೀಲ್:–** ಮಾನ್ಯ ಸಭಾಪತಿಯವರೆ, House is not in order. ಈ ಸಮಯದಲ್ಲಿ ಮಾತನಾಡಲು ಅವಕಾಶ ಕೊಡಬಾರದು. It is a disrespect to the House. ಸದನ ಆರ್ಡರ್‌ನಲ್ಲಿ ಇದ್ದಾಗ ಮಾತ್ರ ಮಾತನಾಡಲು ಅವಕಾಶ ಕಲ್ಪಿಸಬೇಕು.

ಸಭಾಪತಿಯವರು:– House ಯಾವಾಗಲೂ orderನಲ್ಲಿ ಇಲ್ಲ. ನಾವು ಏನು ಮಾಡುವುದು?

**(ಗೊಂದಲ)**

**ಡಾ॥ ಜಯಮಾಲ (ಸಭಾನಾಯಕರು):–** ಮಾನ್ಯ ಸಭಾಪತಿಯವರೆ, ಇತ್ತೀಚೆಗೆ ಸದನ ಸರಿಯಾಗಿ orderನಲ್ಲಿ ಇಲ್ಲವೇ ಇಲ್ಲ. ಏನು ಮಾಡುವುದು? ಬಜೆಟ್ ಮೇಲಿನ ಚರ್ಚೆಗೆ ಅವಕಾಶ ಮಾಡಿಕೊಡಬೇಕೆಂದು ನಾನು ತಮ್ಮ ಮೂಲಕ ಎಲ್ಲಾ ಮಾನ್ಯ ಸದಸ್ಯರಿಗೆ ಕೇಳಿಕೊಳ್ಳುತ್ತೇನೆ.

**(ಗೊಂದಲ)**

**ಸಭಾಪತಿಯವರು:–** ಮಾನ್ಯ ರೇವಣ್ಣನವರೆ, ತಾವು ತಮ್ಮ ಮಾತನ್ನು ಮುಂದುವರೆಸಿ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):–** ಮಾನ್ಯ ಸಭಾಪತಿಯವರೆ, ಅವರ ಆಲೋಚನೆಯಂತೆ, ದೂರಗಾಮಿ ಯೋಜನೆ ಇರುವಂತಹ ಮತ್ತು ಬಡವರ ವಿರೋಧಿಯಾಗಿರುವ, ರೈತರ ಸಾಲವನ್ನು ಮನ್ನಾ ಮಾಡುವುದಕ್ಕೆ ಯೋಚನೆ ಇಲ್ಲದಿರುವ ಬಜೆಟ್‌ನ್ನು ಘೋಷಣೆ ಮಾಡಿರುವುದರಿಂದ ಈ ಬಡ್ಜೆಟ್‌ನ್ನು ಏನು ಮಾಡುತ್ತೀರಿ?

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಹೆಚ್.ಎಂ.ರೇವಣ್ಣ:-** ಮಾನ್ಯ ಸಭಾಪತಿಯವರೆ, ಇವತ್ತಿನ ದಿವಸ ಬಂಡವಾಳ ಹೂಡಿಕೆಯಲ್ಲಿ ಇಡೀ ಭಾರತದಲ್ಲಿಯೇ ಕರ್ನಾಟಕ ಸರ್ಕಾರ ಮೊದಲನೆಯದಾಗಿದೆ. ವ್ಯವಸಾಯ ಕ್ಷೇತ್ರದಲ್ಲಿ, ರೇಷ್ಮೆ ವಿಭಾಗದಲ್ಲಿ...

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೆ, ಸಮಾಜ ಕಲ್ಯಾಣ ಸಚಿವರಾದ ಶ್ರೀ ಪುಟ್ಟರಂಗಶೆಟ್ಟಿಯವರಿಗೆ ಸೇರಿದ್ದೆಂದು ಹೇಳಲಾದ 25 ಲಕ್ಷ ರೂಪಾಯಿಗಳ ಪ್ರಕರಣ ಏನಾಯಿತು? ಇಡೀ ಭಾರತದಲ್ಲೇ ಕರ್ನಾಟಕ ಸರ್ಕಾರ ಮೊದಲನೆಯ ಸ್ಥಾನದಲ್ಲಿದೆ. ರೈತರಿಗೆ ವ್ಯವಸಾಯ ಕ್ಷೇತ್ರಕ್ಕೆ ಬಹಳಷ್ಟು ಚರ್ಚೆಯಾದ ಸಂದರ್ಭದಲ್ಲಿ...

**(ಗೊಂದಲ)**

**ಶ್ರೀ ಹೆಚ್.ಎಂ.ರೇವಣ್ಣ:-** ಮಾನ್ಯ ಸಭಾಪತಿಯವರೆ, ಇವತ್ತಿನ ದಿವಸ ನಮ್ಮ ಸರ್ಕಾರ ರೇಷ್ಮೆ ಅಭಿವೃದ್ಧಿಗೆ ಆಯವ್ಯಯದಲ್ಲಿ ಹೆಚ್ಚು ಒತ್ತು ಕೊಟ್ಟಿದೆ.

**(ಈ ಹಂತದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ, ವಿರೋಧ ಪಕ್ಷದ ಇನ್ನುಳಿದ ಎಲ್ಲಾ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು "ಉತ್ತರ ಕರ್ನಾಟಕ ಭಾಗಕ್ಕೆ ಅನ್ಯಾಯ ಮಾಡಿದ ಸಮ್ಮಿಶ್ರ ಸರ್ಕಾರಕ್ಕೆ ಧಿಕ್ಕಾರ, ಧಿಕ್ಕಾರ" ಎಂಬ ಘೋಷಣೆಯನ್ನು ಕೂಗುತ್ತಿದ್ದರು)**

**ಶ್ರೀ ಹೆಚ್.ಎಂ.ರೇವಣ್ಣ:-** ಮಾನ್ಯ ಸಭಾಪತಿಯವರೆ, ವ್ಯವಸಾಯದ ಜೊತೆಗೆ ಉಪ ಕಸುಬುಗಳಾದ ಹೈನುಗಾರಿಕೆ, ರೇಷ್ಮೆ ಹಾಗೂ ಇನ್ನಿತರೆ ಕ್ಷೇತ್ರಗಳಿಗೆ ಪೂರಕವಾದ ಕಾರ್ಯಕ್ರಮಗಳನ್ನು ಕೊಡುವ ಮೂಲಕ ರೈತರಿಗೆ ಉತ್ತೇಜನ ಕೊಟ್ಟಂತಹ ಸನ್ಮಾನ್ಯ ಶ್ರೀ ಹೆಚ್.ಡಿ.ಕುಮಾರಸ್ವಾಮಿಯವರ ಸರ್ಕಾರ ಇಡೀ ಭಾರತದಲ್ಲಿಯೇ ಪ್ರಥಮ ಎಂದು ಹೇಳುವುದಕ್ಕೆ ನಮಗೆ ಹೆಮ್ಮೆಯಾಗುತ್ತದೆ.

**(ಈ ಹಂತದಲ್ಲಿ ಆಡಳಿತ ಪಕ್ಷದ ಸದಸ್ಯರು ಮೇಜು ಕುಟ್ಟುವ ಮೂಲಕ ತಮ್ಮ ಹರ್ಷವನ್ನು ವ್ಯಕ್ತಪಡಿಸಿದರು)**

" ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಹೆಚ್.ಎಂ.ರೇವಣ್ಣ:-** ಮಾನ್ಯ ಸಭಾಪತಿಯವರೆ, ನಮ್ಮ ಸಮ್ಮಿಶ್ರ ಸರ್ಕಾರ ನೀರಾವರಿ ಮತ್ತು ಶಿಕ್ಷಣ ಕ್ಷೇತ್ರಕ್ಕೂ ಹೆಚ್ಚಿನ ಒತ್ತು ಕೊಟ್ಟಿದೆ. ಇಂತಹ ಸಂದರ್ಭದಲ್ಲಿ ಇಡೀ ರಾಜ್ಯದ ಅಭಿವೃದ್ಧಿ ಕೆಲಸ ಮಾಡತಕ್ಕಂಥ ಸಮ್ಮಿಶ್ರ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಮಾನ್ಯ ವಿರೋಧ ಪಕ್ಷದವರಿಗೆ ಇದನ್ನು ಸಹಿಸುವುದಕ್ಕೆ ಆಗುತ್ತಿಲ್ಲ. ನಮ್ಮ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುವಂತಹ ಕೆಲಸವನ್ನು ಅವರು ಮಾಡುತ್ತಿದ್ದಾರೆಯೇ ಹೊರತು, ಒಳ್ಳೆಯ ಕೆಲಸಕ್ಕೆ ಇವರ ಸಹಕಾರ ಇಲ್ಲ. ಅಭಿವೃದ್ಧಿಪರವಾದ ಅಯವ್ಯಯಕ್ಕೆ ವಿರೋಧಪಕ್ಷದವರು ಹೆಚ್ಚಿನ ಸಹಕಾರ ಕೊಡಬೇಕಾಗಿತ್ತು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಆಡಳಿತ ಪಕ್ಷಕ್ಕೆ ನೀಡಿರುವಷ್ಟೇ ಆದ್ಯತೆಯನ್ನು ವಿರೋಧ ಪಕ್ಷಕ್ಕೂ ಕೂಡ ನೀಡಲಾಗಿದೆ. ಆದರೆ ವಿರೋಧ ಪಕ್ಷದವರು ಇದನ್ನು ಅರಿತಂತೆ ಕಾಣುತ್ತಿಲ್ಲ. ನಾನು ಈ ಆಯವ್ಯಯವನ್ನು ಸ್ವಾಗತ ಮಾಡುತ್ತಿದ್ದೇನೆಂದು ಹೇಳಿ ನನ್ನ ಮಾತುಗಳನ್ನು ಮುಗಿಸುತ್ತೇನೆ.

**ಸಭಾಪತಿಯವರು:-** ಈಗ ಸದನವನ್ನು ಭೋಜನ ವಿರಾಮಕ್ಕಾಗಿ ಮಧ್ಯಾಹ್ನ 3.00 ಗಂಟೆಯವರೆಗೆ ಮುಂದೂಡುತ್ತಿದ್ದೇನೆ.

(72) 3:30 14-02-2019 ಸಿಎಸ್/ಎಕೆ

**(ಭೋಜನ ವಿರಾಮಕ್ಕಾಗಿ ಮಧ್ಯಾಹ್ನ 1 ಗಂಟೆ 28 ನಿಮಿಷಕ್ಕೆ ಮುಂದೂಡಲ್ಪಟ್ಟಿದ್ದ ಸದನವು ಪುನಃ ಮಧ್ಯಾಹ್ನ 3 ಗಂಟೆ 32 ನಿಮಿಷಕ್ಕೆ ಸಮಾವೇಶಗೊಂಡಿತು)**

**(ಸಭಾಪತಿಯವರಾದ ಶ್ರೀ ಕೆ.ಪ್ರತಾಪಚಂದ್ರಶೆಟ್ಟಿಯವರು ಪೀಠವನ್ನಲಂಕರಿಸಿದರು)**

## 8. ಸಭೆಯ ಮುಂದಿಡಲಾದ ಕಾಗದ ಪತ್ರಗಳು

**ಕಾರ್ಯದರ್ಶಿ, ಕವಿಪ:-** ಕರ್ನಾಟಕ ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುತ್ತಿದ್ದೇನೆ.

1. ಕರ್ನಾಟಕ ಧನವಿನಿಯೋಗ ವಿಧೇಯಕ, 2019
2. ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2019

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

## 9. ಶಾಸನ ರಚನೆ

## ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ

### ಏ) ಕರ್ನಾಟಕ ಧನವಿನಿಯೋಗ ವಿಧೇಯಕ, 2019

### ಪರ್ಯಾಲೋಚನಾ ಪ್ರಸ್ತಾವ

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಮುಖ್ಯ ಮಂತ್ರಿಗಳ ಪರವಾಗಿ):–** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019 ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು.**

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಮುಖ್ಯ ಮಂತ್ರಿಗಳ ಪರವಾಗಿ):–** ಮಾನ್ಯ ಸಭಾಪತಿಯವರೇ, 2019-2020ನೇ ಸಾಲಿನ ಆಯವ್ಯಯದಲ್ಲಿ ರಾಜ್ಯ ಸರ್ಕಾರ ಮುಂದಿನ ವರ್ಷದಲ್ಲಿ ಕೈಗೆತ್ತಿಕೊಳ್ಳುವ ಕಾರ್ಯಕ್ರಮಗಳ ಬಗ್ಗೆ ಈಗಾಗಲೇ ಮಾನ್ಯ ಮುಖ್ಯಮಂತ್ರಿಗಳು ಮಂಡಿಸಿರುವ ಆಯವ್ಯಯದ ಭಾಷಣದಲ್ಲಿ ಪ್ರಸ್ತಾಪವನ್ನು ಮಾಡಿದ್ದಾರೆ. ಈ 2019-20ನೇ ಸಾಲಿನ ಒಟ್ಟಾರೆ ಆಯವ್ಯಯದ ಗಾತ್ರ 2,34,153 ಕೋಟಿ ರೂಪಾಯಿಗಳು, ಕಳೆದ ವರ್ಷ 2,18,488 ಕೋಟಿ ರೂಪಾಯಿಗಳಿತ್ತು, ಈ ವರ್ಷಕ್ಕೆ 15,665 ಕೋಟಿ ರೂಪಾಯಿಗಳ ಹೆಚ್ಚಳ ಆಗಿದೆ. ಇದರಿಂದ ಶೇಕಡ 7.17 ರಷ್ಟು ಹೆಚ್ಚಳ ಆಗಿದೆ. ಈ ವೆಚ್ಚದ ಪೈಕಿ ಒಟ್ಟು ರಾಜಸ್ವ ವೆಚ್ಚ 1,81,605 ಕೋಟಿ ರೂಪಾಯಿಗಳು, ಬಂಡವಾಳ ವೆಚ್ಚ 42,584 ಕೋಟಿ ರೂಪಾಯಿಗಳು ಹಾಗೂ ಸಾರ್ವಜನಿಕ ಸಾಲವನ್ನು 9,964 ಕೋಟಿ ರೂಪಾಯಿಗಳಿಗೆ ಪ್ರಸ್ತಾಪಿಸಲಾಗಿದೆ. ಬಂಡವಾಳ ವೆಚ್ಚ ಒಟ್ಟು ಸಂಚಿತ ನಿಧಿಯ ಪ್ರಮಾಣದ ಪ್ರಕಾರ 2019-20ನೇ ಸಾಲಿನ ಆಯವ್ಯಯದಲ್ಲಿ ಶೇಕಡ 18.18 ರಷ್ಟು ಇರುತ್ತದೆ.

ಮಾನ್ಯ ಸಭಾಪತಿಗಳೇ, ಸಾರ್ವಜನಿಕ ಋಣ ಎಷ್ಟಿದೆ ಎಂದರೆ, 2018-19ನೇ ಸಾಲಿನ ಆರಂಭಿಕ ಅಂದಾಜಿನಲ್ಲಿ 11,136 ಕೋಟಿ ರೂಪಾಯಿಗಳ ಸಾಲಕ್ಕೆ ನಾವು ಸದನದಲ್ಲಿ ಅನುಮತಿಯನ್ನು ಪಡೆದುಕೊಂಡಿದ್ದೆವು. ಆದರೆ ವಾಸ್ತವವಾಗಿ ಪರಿಷ್ಕೃತ ಅಂದಾಜು 9,964 ಕೋಟಿ ರೂಪಾಯಿಗಳನ್ನು ಮುಂದಿನ ವರ್ಷದ ಸಾರ್ವಜನಿಕ ಸಾಲಕ್ಕಾಗಿ ಮಂಜೂರಾತಿಯನ್ನು ಪಡೆದುಕೊಂಡಿದ್ದೇವೆ. ಇದನ್ನು ವರ್ಷದಿಂದ ವರ್ಷಕ್ಕೆ ಹೋಲಿಕೆ ಮಾಡಿ ನೋಡಿದಾಗ 2019-20ನೇ ಸಾಲಿನ ಅಂದಾಜು ಹಿಂದಿನ ವರ್ಷಕ್ಕಿಂತ ಈ ವರ್ಷ ಹೆಚ್ಚುವರಿ ಋಣದಲ್ಲಿ 1,171 ಕೋಟಿ ರೂಪಾಯಿಗಳನ್ನು

"ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಕಡಿಮೆ ಮಾಡುವಂತಹ ಪ್ರಸ್ತಾವವನ್ನು ನಾವು ಮಾಡಿದ್ದೇವೆ. ನಾವು ಏನು ಸಾಲವನ್ನು ಪಡೆಯುತ್ತೇವೆ, ಅದು 2018-19ನೇ ಸಾಲಿನಲ್ಲಿ 11,136 ಕೋಟಿ ರೂಪಾಯಿಗಳಿಗೆ ಈ ಸದನದ ಅನುಮತಿಯನ್ನು ಪಡೆದುಕೊಂಡಿದ್ದೆವು. ಈ ಸಾಲಿನಲ್ಲಿ ಅದನ್ನು ಕಡಿಮೆ ಮಾಡಿದ್ದೇವೆ. ಈ ಸಾರ್ವಜನಿಕ ಋಣವನ್ನು 9,964 ಕೋಟಿ ರೂಪಾಯಿಗಳಿಗೆ ಕಡಿಮೆ ಮಾಡುವ ಪ್ರಸ್ತಾವವನ್ನು ಸದನದ ಮುಂದಿಟ್ಟಿದ್ದೇವೆ. ಇನ್ನು ನಮ್ಮ ವಿತ್ತೀಯ ಹೊಣೆಗಾರಿಕೆ ಅಧಿನಿಯಮದ ಬಗ್ಗೆ ಮಾತನಾಡುವುದಾದರೆ ತಮಗೆಲ್ಲರಿಗೂ ತಿಳಿದಿರುವ ಹಾಗೆ ಕಳೆದ ಸುಮಾರು 8-10 ವರ್ಷಗಳಿಂದ ನಮ್ಮ ಕರ್ನಾಟಕ ರಾಜ್ಯದ ವಿತ್ತೀಯ ಹೊಣೆಗಾರಿಕೆ ಅಧಿನಿಯಮ ಏನಿದೆ, ಅದರ ಪ್ರಕಾರ ...

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಗಳೇ, 48,000 ಕೋಟಿ ರೂಪಾಯಿಗಳ ರೈತರ ಸಾಲವನ್ನು ಏಕಕಾಲದಲ್ಲಿ ಮನ್ನಾ ಮಾಡುವುದಾಗಿ ಭರವಸೆ ನೀಡುತ್ತಾ, ಇದೇ ಸದನದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯವನ್ನು ಮಂಡಿಸಿದ್ದಾರೆ. ಆದರೆ ಸರ್ಕಾರ ಅದಕ್ಕಾಗಿ ಮುಂದಿನ ಸಾಲಿಗೆ 12,000 ಕೋಟಿ ರೂಪಾಯಿಗಳನ್ನು ಇಟ್ಟಿರುತ್ತದೆ. ಸರ್ಕಾರದ ಭರವಸೆ ಈಗ ಸುಳ್ಳು ಭರವಸೆಯಾಗಿರುವ ಬಗ್ಗೆ ಸರ್ಕಾರ ಏನನ್ನು ಹೇಳುತ್ತದೆ? ಸರ್ಕಾರವೇ ಏಕಕಾಲದಲ್ಲಿ ರೈತರ 48,000 ಕೋಟಿ ರೂಪಾಯಿಗಳನ್ನು ಮನ್ನಾ ಮಾಡುವುದಾಗಿ ಹೇಳಿದೆ. ಕರ್ನಾಟಕ ರಾಜ್ಯದಲ್ಲಿ ಮಾದರಿ ಕೃಷಿಯನ್ನು ಮಾಡುವುದಾಗಿ ಹೇಳಿದ್ದಾರೆ. ಅತಿ ಸಣ್ಣ ರೈತರಿಗೆ ಅವರ ಆಭರಣಗಳ ಮೇಲೆ ವಾರ್ಷಿಕ 3% ಬಡ್ಡಿಗೆ ಸಾಲವನ್ನು ನೀಡುವ ಬಗ್ಗೆ ಸರ್ಕಾರ ಸುಳ್ಳು ಭರವಸೆ ನೀಡಿದೆ.

**(ಗೊಂದಲ)**

**ಸಭಾಪತಿಯವರು:-** ವಿರೋಧ ಪಕ್ಷದ ನಾಯಕರೆ, ಒಂದು ಧರಣಿಯನ್ನು ಮಾಡಿ, ಇಲ್ಲದಿದ್ದರೆ ಚರ್ಚೆಯಲ್ಲಿ ಭಾಗವಹಿಸಿ.

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಮುಖ್ಯಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಗಳೇ, ಮಾನ್ಯ ವಿರೋಧ ಪಕ್ಷದ ನಾಯಕರು ಬಹಳ ಮಹತ್ವವಾದ ವಿಚಾರವನ್ನು ಈ ಸದನದ ಗಮನಕ್ಕೆ ತರುತ್ತಿದ್ದಾರೆ. ಆದರೆ ನನ್ನ ಮಾತುಗಳನ್ನು ಮುಗಿಸಿದ ನಂತರ ಮಾನ್ಯ ಸಭಾಪತಿಯವರು ಅವರಿಗೆ ಅನುಮತಿ ನೀಡಿದಂತಹ ಸಂದರ್ಭದಲ್ಲಿ ಅವರು ಮಾತನಾಡಬಹುದು. ಆದ್ದರಿಂದ ಸರ್ಕಾರ ತನ್ನ ಹೇಳಿಕೆಯನ್ನು ಮಾಡಲಿಕ್ಕೆ ತಾವು ಮೊದಲು ಅವಕಾಶವನ್ನು ಮಾಡಿಕೊಡಬೇಕಾಗುತ್ತದೆ.

(ಗೊಂದಲ)

ಮಾನ್ಯ ಸಭಾಪತಿಗಳೇ, ಬರುವ ಆಯವ್ಯಯ ವರ್ಷದಲ್ಲಿ ರೈತರ ಸಾಲವನ್ನು ಮನ್ನಾ ಮಾಡುವ ಸಲುವಾಗಿ ಹಾಗೂ ರಾಜ್ಯದ ಅಭಿವೃದ್ಧಿಗೆ ಪೂರಕವಾದ ಅಂದಾಜನ್ನು ರಾಜ್ಯದ ಮಾನ್ಯ ಮುಖ್ಯಮಂತ್ರಿಗಳು ಮಂಡನೆಯನ್ನು

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಮಾಡಿದ್ದಾರೆ. 5000 ಕೋಟಿ ರೂಪಾಯಿಗಳನ್ನು ರೈತರ ಸಾಲ ಮನ್ನಾ ಮಾಡುವುದಕ್ಕಾಗಿ ಹೆಚ್ಚುವರಿಯಾಗಿ ಪಡೆಯಲು ನಾವು ಈ ಸದನದ ಅನುಮತಿಯನ್ನು ಕೇಳುತ್ತಿದ್ದೇವೆ. ರೈತರ ಸಾಲ ಮನ್ನಾ ಮಾಡುವುದರ ಜೊತೆಗೆ ಈ ರಾಜ್ಯದ ಅಭಿವೃದ್ಧಿಗೆ ಈ ಸರ್ಕಾರ ಬದ್ಧವಾಗಿದೆ. ಹಾಗಾಗಿ ಈ ಸಾಲಿನ ಧನವಿನಿಯೋಗ ವಿಧೇಯಕವನ್ನು ಈ ಸದನ ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:–** ಪ್ರಸ್ತಾವ ಏನೆಂದರೆ;

"2019ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.**

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು.**

**ಖಂಡ 2 ಮತ್ತು 3**

**ಸಭಾಪತಿಯವರು:–** "ಖಂಡ 2 ಮತ್ತು 3 ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ಮತ್ತು 3ನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

**ಸಭಾಪತಿಯವರು:–** ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ಪೀಠಿಕೆ, ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ಪೀಠಿಕೆ, ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**ಪ್ರಸ್ತಾವದ ಅಂಗೀಕಾರ**

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಮುಖ್ಯ ಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಗಳೇ, ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ “2019ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ “2019ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸುವುದು”

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.**

(ಮುಂದು)

(73)/14-2-2019/3-40/ಎಲ್‌ಎಂ/ಎಕೆ

**ಐ) ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2019**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)(ಮುಖ್ಯಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಗಳೆ, “ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2019ನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಮುಖ್ಯಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಗಳೆ, ಈ ವರ್ಷ ಬಹಳ ಮುಖ್ಯವಾಗಿ ರೈತರ ಸಾಲ ಮನ್ನಾ ಘೋಷಣೆ ಮಾಡಿದ್ದೇವೆ. ರೈತರ ಸಾಲಮನ್ನಾ ಯೋಜನೆಯ ಅಡಿಯಲ್ಲಿ, 2018-19ನೇ ಸಾಲಿನಲ್ಲಿ ಹೆಚ್ಚಿನ ರೈತರ ಸಾಲ ಮನ್ನಾ ಮಾಡಬೇಕು ಎನ್ನುವ ಉದ್ದೇಶದಿಂದ ಈ ಪೂರಕ ಅಂದಾಜಿನಲ್ಲಿ 5000 ಕೋಟಿ ರೂ.ಗಳನ್ನು ಹೆಚ್ಚುವರಿಯಾಗಿ ಸಾಲಮನ್ನಾ ಯೋಜನೆಗೆ ಒದಗಿಸುತ್ತಿದ್ದೇವೆ.

“ ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”

(ಈ ಹಂತದಲ್ಲಿ ಸದನದ ಬಾವಿಯೊಳಗೆ ಧರಣಿ ನಿರತ ಭಾರತೀಯ ಜನತಾ ಪಕ್ಷದ ಸದಸ್ಯರು “We want justice”, “We want justice” ಎನ್ನುವ ಘೋಷಣೆಗಳನ್ನು ಕೂಗಿದರು)

ಇದರಲ್ಲಿ ಸಹಕಾರ ಸಂಘಗಳಲ್ಲಿ ರೈತರು ತೆಗೆದುಕೊಂಡಿರುವ ಸಾಲವನ್ನು ಮನ್ನಾ ಮಾಡಲು ಅಪೆಕ್ಸ್ ಬ್ಯಾಂಕ್‌ಗೆ 2,741 ಕೋಟಿ ರೂ.ಗಳನ್ನು ಹೆಚ್ಚುವರಿಯಾಗಿ ಕೊಡಲಾಗಿದೆ. ಅದು ಅಲ್ಲದೆ ವಾಣಿಜ್ಯ ಬ್ಯಾಂಕುಗಳಲ್ಲಿಯ ರೈತರ ಸಾಲ ಮನ್ನಾ ಮಾಡಲು 2500 ಕೋಟಿ ರೂ.ಗಳನ್ನು ಕೊಡಲಾಗಿದೆ. ಎರಡು ಸೇರಿ ಒಟ್ಟು 5241 ಕೋಟಿ ರೂ.ಗಳನ್ನು ಪೂರಕ ಅಂದಾಜಿನ ಮೂಲಕ ಸಾಲಮನ್ನಾಕ್ಕಾಗಿ ಹೆಚ್ಚುವರಿ ಅನುದಾನವನ್ನು ಸರ್ಕಾರ ಒದಗಿಸಿದೆ. ಹೆಚ್ಚು ರೈತರ ಸಾಲ ಮನ್ನಾ ಇದೇ ವರ್ಷ ಆಗಬೇಕು ಎನ್ನುವ ಉದ್ದೇಶದಿಂದ ಸರ್ಕಾರ ಈ ಕ್ರಮ ತೆಗೆದುಕೊಂಡಿದೆ.

**(ಗೊಂದಲ)**

ಎಸ್ಕಾಂಗಳ ಬಿಲ್ ಪಾವತಿ ಮಾಡದೆ ಇರುವುದರಿಂದ ಕೇಂದ್ರದ National Power Grid ನವರು ನಿಮಗೆ ವಿದ್ಯುತ್ ಸರಬರಾಜು ಮಾಡುವುದಿಲ್ಲ, ವಿದ್ಯುತ್‌ನ್ನು ಕಡಿತಗೊಳಿಸುತ್ತೇವೆ ಎಂದು ಕೇಂದ್ರ ಸರ್ಕಾರ ಎಸ್ಕಾಂಗಳ ಮೇಲೆ ದಬಾವಣೆಯನ್ನು ಮಾಡುತ್ತಿರುವುದರಿಂದ ಎಸ್ಕಾಂ ಬಿಲ್ ಪಾವತಿ ಮಾಡಲು 1500 ಕೋಟಿ ರೂ.ಗಳ ಹೆಚ್ಚುವರಿ ಅನುದಾನವನ್ನು ಕೊಡಲು ಇದರಲ್ಲಿ ಪ್ರಸ್ತಾಪಿಸಲಾಗಿದೆ. ಹೀಗಾಗಿ ರಾಜ್ಯದ ಜನರಿಗೆ ವಿದ್ಯುತ್ ಸರಬರಾಜಿನಲ್ಲಿ ಯಾವುದೇ ತೊಂದರೆಯಾಗದಂತೆ ಪೂರಕ ಅಂದಾಜಿನಲ್ಲಿ ಅನುದಾನವನ್ನು ಒದಗಿಸಲಾಗಿದೆ.

‘ನರೇಗಾ’ ಯೋಜನೆಯಲ್ಲಿ ಕೂಲಿ ಮಾಡಿದ ಕಾರ್ಮಿಕರಿಗೆ ಕೂಲಿಯ ಹಣವನ್ನು ಕೊಡದೆ ಇರುವುದರಿಂದ, ಕೂಲಿಯನ್ನು ಕೊಡಲು ಕೇಂದ್ರ ಸರ್ಕಾರ ವಿಫಲವಾಗಿರುವುದರಿಂದ ರಾಜ್ಯ ಸರ್ಕಾರ ತನ್ನ ರಾಜಸ್ವದಿಂದ 500 ಕೋಟಿ ರೂ.ಗಳನ್ನು ಒದಗಿಸಿದೆ.

**(ಈ ಹಂತದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ ಭಾರತೀಯ ಜನತಾ ಪಕ್ಷದ ಸದಸ್ಯರು ಸರ್ಕಾರದ ವಿರುದ್ಧ ಜೋರಾಗಿ ಘೋಷಣೆಗಳನ್ನು ಕೂಗುತ್ತಿದರು)**

ನರೇಗಾ ಯೋಜನೆಯಲ್ಲಿ ಕೂಲಿ ಕೊಡಲು ಕೇಂದ್ರ ಸರ್ಕಾರ ವಿಫಲವಾಗಿರುವುದರಿಂದ ರಾಜ್ಯ ಸರ್ಕಾರ ತನ್ನ ರಾಜಸ್ವದಿಂದ 500 ಕೋಟಿ ರೂ.ಗಳನ್ನು ಒದಗಿಸಿದೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಗಳೆ, ಕೇಂದ್ರ ಸರ್ಕಾರದ ಹಣವನ್ನು ರಾಜ್ಯ ಸರ್ಕಾರ ದುರುಪಯೋಗ ಮಾಡಿಕೊಂಡಿದೆ. ಕೇಂದ್ರ ಸರ್ಕಾರ ಕೊಟ್ಟಿರುವ ಅನುದಾನವನ್ನು ಉಪಯೋಗಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ.

(ಗೊಂದಲ)

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):-** ಮಾನ್ಯ ಸಭಾಪತಿಗಳೆ, ಕೂಲಿ ಕಾರ್ಮಿಕರ ಹಿತವನ್ನು ಕಾಪಾಡಲು ಇವತ್ತು ರಾಜ್ಯ ಸರ್ಕಾರ 500 ಕೋಟಿ ರೂ.ಗಳನ್ನು ಒದಗಿಸಿದೆ.

(ಗೊಂದಲ)

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:- ಮಾನ್ಯ ಸಭಾಪತಿಗಳೆ,** 1800 ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಆಗಿರುವ ಅವ್ಯವಹಾರದ ಬಗ್ಗೆ ಮೊದಲು ತನಿಖೆಯಾಗಲಿ.

(ಗೊಂದಲ)

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):-** ಮಾನ್ಯ ಸಭಾಪತಿಗಳೆ, ಒಟ್ಟು 8016837.06 ಲಕ್ಷ ರೂಪಾಯಿಗಳನ್ನು ಪೂರಕ ಅಂದಾಜಿನಲ್ಲಿ ಒದಗಿಸಲಾಗಿದೆ. ಇದಕ್ಕೆ ಸದನ ತನ್ನ ಒಪ್ಪಿಗೆಯನ್ನು ಕೊಡಬೇಕೆಂದು ತಮ್ಮ ಮುಖಾಂತರ ಕೇಳಿಕೊಳ್ಳುತ್ತೇನೆ.

(ಗೊಂದಲ)

**ಸಭಾಪತಿಯವರು:- ಪ್ರಸ್ತಾವ ಏನೆಂದರೆ;**

"ಕರ್ನಾಟಕ ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ರ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು**

**ಖಂಡ 2 ಮತ್ತು 3**

**ಸಭಾಪತಿಯವರು:-** "ಖಂಡ 2 ಮತ್ತು 3 ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಖಂಡ 2 ಮತ್ತು 3ನ್ನು ವಿಧೇಯಕಕ್ಕೆ ಸೇರಿಸಲಾಯಿತು)**

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಗಳೆ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ರ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:** ಪ್ರಸ್ತಾವ ಏನೆಂದರೆ;

"ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2019ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

"ತಿದ್ದುಪಡಿಯಾಗದ ಪ್ರತಿ,ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

(ಈ ಹಂತದಲ್ಲಿ ಸದನದ ಬಾವಿಯೊಳಗೆ ಧರಣಿಯಲ್ಲಿ ನಿರತರಾಗಿದ್ದ ವಿರೋಧ ಪಕ್ಷದ ಸದಸ್ಯರುಗಳು **“bogus budget** ಗೆ ಧಿಕ್ಕಾರ, ಧಿಕ್ಕಾರ” ಎನ್ನುವ ಘೋಷಣೆಗಳನ್ನು ಕೂಗುತ್ತಿದ್ದರು)

## 10. ಚುಕ್ಕೆ ಗುರ್ತಿನ ಪ್ರಶ್ನೆಗಳಿಗೆ ಮತ್ತು ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

**ಡಾ:ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಗಳೆ, ದಿನಾಂಕ: 07-02-2019, ಸಮೂಹ-IVರ ಚುಕ್ಕೆ ಗುರುತಿನ ಒಟ್ಟು 15 ಪ್ರಶ್ನೆಗಳ ಪೈಕಿ 13 ಪ್ರಶ್ನೆಗಳಿಗೆ ಉತ್ತರವನ್ನು ಹಾಗೂ ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ಉತ್ತರಿಸುವ ಒಟ್ಟು 63 ಪ್ರಶ್ನೆಗಳ ಪೈಕಿ 46 ಪ್ರಶ್ನೆಗಳಿಗೆ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**ಮತ್ತು**

ಮಾನ್ಯ ಸಭಾಪತಿಗಳೆ, ದಿನಾಂಕ:11-02-2019, ಸಮೂಹ-Iರ ಚುಕ್ಕೆ ಗುರುತಿನ ಒಟ್ಟು 15 ಪ್ರಶ್ನೆಗಳ ಪೈಕಿ 13 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ಚುಕ್ಕೆ ಗುರ್ತಿಲ್ಲದ ಲಿಖಿತ ಮೂಲಕ ಉತ್ತರಿಸುವ ಒಟ್ಟು 86 ಪ್ರಶ್ನೆಗಳ ಪೈಕಿ 75 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**ಮತ್ತು**

ಮಾನ್ಯ ಸಭಾಪತಿಗಳೆ, ದಿನಾಂಕ:12-02-2019, ಸಮೂಹ-IIರ ಚುಕ್ಕೆ ಗುರುತಿನ ಒಟ್ಟು 15 ಪ್ರಶ್ನೆಗಳ ಪೈಕಿ 05 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು, ಹಾಗೂ ಇನ್ನುಳಿದ 09 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 102 ಪ್ರಶ್ನೆಗಳ ಪೈಕಿ 91 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**ಮತ್ತು**

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”

ಮಾನ್ಯ ಸಭಾಪತಿಗಳೆ, ದಿನಾಂಕ:14–02–2019, ಸಮೂಹ–IVರ ಚುಕ್ಕೆ ಗುರುತಿನ ಒಟ್ಟು 15 ಪ್ರಶ್ನೆಗಳ ಪೈಕಿ 14 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 106 ಪ್ರಶ್ನೆಗಳ ಪೈಕಿ 61 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**ಸಭಾಪತಿಯವರು:–** ಮಂಡಿಸಲಾಯಿತು.

## 11. ಸಚಿವರ ಹೇಳಿಕೆಗಳು

**ಡಾ:ಜಯಮಾಲ(ಸಭಾನಾಯಕರು):–** ಮಾನ್ಯ ಸಭಾಪತಿಗಳೆ, ನಿಯಮ 72ರ ಅಡಿಯಲ್ಲಿ ಸ್ವೀಕರಿಸಲಾದ ಒಟ್ಟು 120 ಸೂಚನೆಗಳ ಪೈಕಿ 18 ಸೂಚನೆಗಳಿಗೆ ಉತ್ತರಗಳನ್ನು ಹಾಗೂ ನಿಯಮ 330ರ ಅಡಿಯಲ್ಲಿ ಸ್ವೀಕರಿಸಲಾದ ಒಟ್ಟು 52 ಸೂಚನೆಗಳ ಪೈಕಿ 9 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**ಸಭಾಪತಿಯವರು:–** ಮಂಡಿಸಲಾಯಿತು.

**(ಮುಂದು)**

(74)14–02–2019(03–50) ಬಿಎಸ್‌ಡಿ–ಆರ್‌ಎನ್

(ಗೊಂದಲ)

**ಸಭಾಪತಿಯವರು:–** ಈಗ ಸದನವನ್ನು ಸಂಜೆ 4 ಗಂಟೆ 30 ನಿಮಿಷಗಳವರೆಗೆ ಮುಂದೂಡಲಾಗಿದೆ.

(75)(76) 14-02-2019 4-40, 4-50 pk-(bkp)-vk(md)ds-vk(md)

**(ಮಧ್ಯಾಹ್ನ 3 ಗಂಟೆ 51 ನಿಮಿಷಗಳಿಗೆ ಮುಂದೂಡಲ್ಪಟ್ಟಿದ್ದ ಸದನವು ಪುನಃ ಸಂಜೆ 4 ಗಂಟೆ 45 ನಿಮಿಷಗಳಿಗೆ ಸಮಾವೇಶಗೊಂಡಿತು)**

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”

**(ಸಭಾಪತಿಯವರಾದ ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿಯವರು ಪೀಠವನ್ನು ಅಲಂಕರಿಸಿದರು)**

**ಶ್ರೀ ಅರುಣ ಶಹಾಪುರ(ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ವಿಶ್ವೇಶ್ವರಯ್ಯ ಟೆಕ್ನಿಕಲ್ ಯುನಿವರ್ಸಿಟಿ ಬಗ್ಗೆ ನಾನು ಶೂನ್ಯವೇಳೆಯಲ್ಲಿ ಪ್ರಸ್ತಾಪ ಮಾಡಿರುವುದಕ್ಕೆ ಸರ್ಕಾರದಿಂದ ಉತ್ತರ ಒದಗಿಸಬೇಕು. ಮಾನ್ಯ ಸಭಾನಾಯಕರು ಇದರ ಬಗ್ಗೆ ತಿಳಿಸಬೇಕು.

**(ಗೊಂದಲ)**

**12. ಸಭೆಯ ಮುಂದಿಡಲಾದ ಕಾಗದ ಪತ್ರಗಳು**

**ಕಾರ್ಯದರ್ಶಿ, ಕವಿಪ:-** ಮಾನ್ಯ ಸಭಾಪತಿಯವರೇ, ಕರ್ನಾಟಕ ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2018ನೇ ಸಾಲಿನ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

**(ಗೊಂದಲ)**

**13. ಶಾಸನ ರಚನೆ**

**ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ**

**ಒ)ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2018**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಈ.ತುಕಾರಾಂ(ವೈದ್ಯಕೀಯ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2018ರ **ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ)** ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

"ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಈ.ತುಕಾರಾಂ(ವೈದ್ಯಕೀಯ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೇ, ಸದರಿ ವಿಧೇಯಕದ ಮೊದಲನೆಯ ಪುಟದ ಕೊನೆಯ ಪ್ಯಾರಾದಲ್ಲಿ “ಪರಂತು, ಯಾವೊಬ್ಬ ಸೂಕ್ತ ಅಧಿಕಾರಿಯು ಲಭ್ಯವಿಲ್ಲದಿದ್ದಲ್ಲಿ, ಆಗ ರಾಜ್ಯ ಸರ್ಕಾರವು, ವಿಶ್ವವಿದ್ಯಾಲಯಕ್ಕೆ ಸಂಯೋಜಿತವಾದ ಮತ್ತು ಭಾರತೀಯ ವೈದ್ಯಕೀಯ ಪರಿಷತ್ತಿನ ಮೂಲಕ ಮಾನ್ಯತೆಯನ್ನು ಪಡೆದ ವೈದ್ಯಕೀಯ ಕಾಲೇಜಿನಲ್ಲಿ ಪ್ರಾಧ್ಯಾಪಕನಾಗಿ ಐದು ವರ್ಷಗಳಿಗೆ ಕಡಿಮೆಯಿಲ್ಲದಂತೆ ಬೋಧನಾ ಅನುಭವವನ್ನು ಹೊಂದಿರುವ ಪ್ರಾಧ್ಯಾಪಕನನ್ನು ಮೂರು ವರ್ಷಗಳ ಅವಧಿಯನ್ನು ಮೀರದಂತೆ ರಿಜಿಸ್ಟ್ರಾರ್ ಆಗಿ ನೇಮಕ ಮಾಡಬಹುದು” ಎಂದು ಸೇರಿಸಲಾಗಿದೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

“ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2018ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು”

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು**

**ಖಂಡ 2**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

“ಖಂಡ 2 ವಿಧೇಯಕದ ಅಂಗವಾಗಿರುತ್ತದೆ”

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2ನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

“ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ”

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

**ಪ್ರಸ್ತಾವದ ಅಂಗೀಕಾರ**

**ಶ್ರೀ ಈ ತುಕಾರಾಂ(ವೈದ್ಯಕೀಯ ಶಿಕ್ಷಣ ಸಚಿವರು):-** ಮಾನ್ಯ ಸಭಾಪತಿಯವರೇ, “ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2019ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

“ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2019ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು”

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**14. ಸಾರಾಂಶ**

**ಸಭಾಪತಿಯವರು:-** ಅಧಿವೇಶನದ ಸಾರಾಂಶ ಈ ರೀತಿ ಇರುತ್ತದೆ.

(ಸಾರಾಂಶದ ಪ್ರತಿಯನ್ನು ಲಗತ್ತಿಸಲಾಗಿದೆ)

**(ಸದನವನ್ನು ರಾಷ್ಟ್ರಗೀತೆಯೊಂದಿಗೆ ಸಂಜೆ 4 ಗಂಟೆ 53 ನಿಮಿಷಕ್ಕೆ ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಯಿತು)**

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”